ಸಂಪುಟ : 10 ಸಂಚಿಕೆ: 160 ಪುಟ : 4+2 ಬೆಲೆ: 3.00 ಗುರುವಾರ ಜುಲೈ 31 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 160 Pages : 4+2 Price : 3.00 Thursday July 31 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರದ ಬುಡಕಟ್ಟು ವ್ಯವಹಾರಗಳ ಸಚಿವಾಲಯದ Dharti Aaba Janjatiya Gram Utkarsh Abhiyan ( DA- JGUA) ಯೋಜನೆಯಡಿ ಗುರುತಿಸಿರುವ ಬುಡಕಟ್ಟು ಗ್ರಾಮಗಳಲ್ಲಿ ಪ್ರವಾಸಿಗರಿಗೆ ಅನುಕೂಲವಾಗುವಂತೆ ಹೋಂ ಸ್ಟೇ ಸ್ಥಾಪಿಸಲು ರೂ.5.00 ಲಕ್ಷಗಳ ಸಹಾಯಧನವನ್ನು ಹಾಗು ಹೋಂ ಸ್ಟೇ ನವೀಕರಿಸಲು ರೂ.3.00 ಲಕ್ಷಗಳ ಸಹಾಯಧನವನ್ನು ನೀಡುವ ಸಂಬಂಧ ಪ್ರವಾಸೋದ್ಯಮ ಇಲಾಖೆಯಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿದಾರರು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು. ಅರ್ಜಿದಾರರು ಗದಗ ಜಿಲ್ಲೆಯಿಂದ ಧರ್ತಿ ಆಬಾ ಜನಜಾತೀಯ ಗ್ರಾಮ ಉತ್ಕರ್ಷ ಅಭಿಯಾನ ಕಾರ್ಯಕ್ರಮದಡಿ ಅದರ ಅಕ್ಕಪಕ್ಕದ ಗ್ರಾಮದ ನಿವಾಸಿಯಾಗಿರಬೇಕು. ಯೋಜನೆಯಡಿ ಆಯ್ಕೆಯಾದ ಗ್ರಾಮಗಳ ವಿವರ : ಗದಗ ಜಿಲ್ಲೆಯ ರೋಣ ತಾಲೂಕಿನ ಮೇಲ್ಮಠ , ಲಕ್ಷ್ಮೇಶ್ವರ ತಾಲೂಕಿನ ಒಡೆಯರ ಮಲ್ಲಾಪುರ, ಶಿರಹಟ್ಟಿ ತಾಲೂಕಿನ ಭಾವನೂರ, ಮುಂಡರಗಿ ತಾಲೂಕಿನ ಕೆಲೂರ.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಆಗಸ್ಟ್ 5 ಆಗಿದ್ದು, ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಎ.ಸಿ. ಕಚೇರಿ ಕಟ್ಟಡ, ಗದಗ ಜಿಲ್ಲೆ , ಗದಗ ದೂರವಾಣಿ ಸಂಖ್ಯೆ : 08372-233017, 9844269430, 9916164422 ಸಂಪರ್ಕಿಸಬಹುದಾಗಿದೆ.

## ಕಾಂಗ್ರೆಸ್ ಕಾರ್ಯಕರ್ತನ ಆಟೋಗೆ ಆಸಿಡ್ ಎರಚಿದ ಕಿಡಿಗೇಡಿಗಳು..!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಿಡಿಗೇಡಿಗಳು ಕಾಂಗ್ರೆಸ್ ಕಾರ್ಯಕರ್ತನ ಆಟೋಗೆ ಆಸಿಡ್ ಎರಚಿದ ಘಟನೆ ನಗರದ ನಂದಿನಿ ಲೇಔಟ್ ನಲ್ಲಿ ನಡೆದಿದೆ. ಕಾಂಗ್ರೆಸ್ ಕಾರ್ಯಕರ್ತ ಧನಂಜಯ್ ಎಂಬುವರ ಆಟೋಗೆ ಆಸಿಡ್ ದಾಳಿ ಮಾಡಲಾಗಿದ್ದು, ರಾತ್ರೋರಾತ್ರಿ ಬಂದು ಆಸಿಡ್ ಎರಚಿ ದುಷ್ಕರ್ಮಿಗಳು ಎಸ್ಕೇಪ್ ಆಗಿದ್ದಾರೆ.

## ಬಿಜೆಪಿ ಪ್ರತಿಭಟನೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ರೈತರಿಗೆ ರಸಗೊಬ್ಬರ ಸಿಗದಂತೆ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಭಾರತೀಯ ಜನತಾ ಪಾರ್ಟಿ ರೈತ ಮೋರ್ಚಾ ವತಿಯಿಂದ ಗುರುವಾರ ಬೆಳಿಗ್ಗೆ 10.30 ಗಂಟೆಗೆ ನಗರದ ಗಾಂಧಿ ಸರ್ಕಲ್‌ನಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಹಾಗೂ ನಗರ ಬಿಜೆಪಿ ಮುಖಂಡರ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಗದಗ ವಿಧಾನಸಭಾ ಕ್ಷೇತ್ರದ ಸಮಸ್ತ ರೈತ ಬಾಂಧವರು, ಪಕ್ಷದ ಪದಾಧಿಕಾರಿಗಳು, ಚುನಾಯಿತ ಪ್ರತಿನಿಧಿಗಳು, ಕಾರ್ಯಕರ್ತರು ಆಗಮಿಸಬೇಕೆಂದು ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಗ್ರಾಮೀಣ ಅಧ್ಯಕ್ಷ ಬೂದಪ್ಪ ಹಳ್ಳಿ, ರೈತ ಮೋರ್ಚಾ ಮಂಡಲ ಅಧ್ಯಕ್ಷರುಗಳಾದ ಶಂಕರ ಕರಿಬಿಷ್ಠಿ, ಸಿದ್ದಪ್ಪ ಜೊಂಡಿ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

### ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ ಕಾರ್ಯಕ್ರಮದಲ್ಲಿ ಸತ್ರ ನ್ಯಾಯಾಧೀಶೆ ನಾಗವೇಣಿ ಕರೆ

# ಮಾನವ ಕಳ್ಳ ಸಾಗಾಣಿಕೆ ತಡೆಯಲು ಮುಂದಾಗಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಾನವ ಕಳ್ಳ ಸಾಗಾಣಿಕೆ ಎಂದರೆ ವ್ಯಕ್ತಿಯನ್ನು ಬಲವಂತದಿಂದ, ಮೋಸದಿಂದ ಅಥವಾ ಶೋಷಣೆಗೆ ಗುರಿಪಡಿಸುವ ಉದ್ದೇಶದಿಂದ ಸ್ಥಳಾಂತರಿಸುವುದು. ಇದಕ್ಕೆ ಮಹಿಳೆಯರು, ಮಕ್ಕಳು ಹಾಗೂ ಶೋಷಿತ ವರ್ಗದವರು ಹೆಚ್ಚು ಬಲಿಯಾಗುತ್ತಾರೆ ಎಂದು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ನಾಗವೇಣಿ ಹೇಳಿದರು.

ಗದಗ ಜಿಲ್ಲಾ ಪಂಚಾಯಿತಿ ಸಭಾಭವನದಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಕಾರ್ಮಿಕ ಇಲಾಖೆ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾ ವಕೀಲರ ಸಂಘ ಇವರ ಸಹಯೋಗದಲ್ಲಿ ಬುಧವಾರ ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ ಹಾಗೂ ಜಾಗೃತಿ ಮತ್ತು ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಾನವ ಕಳ್ಳ ಸಾಗಾಣಿಕೆ ಎಂಬುದು ಸಮಾಜಕ್ಕೆ ಅಂಟಿದ ಪಿಡುಗು. ಇದರ ನಿವಾರಣೆಗೆ ಜಾಗೃತಿ ಅಗತ್ಯವಾಗಿದೆ. ಮಾನವ ಕಳ್ಳ ಸಾಗಾಣಿಕೆ ಮಾಡುವುದು ಅಕ್ಷಮ್ಯ ಅಪರಾಧ. ದೇಶ ವಿದೇಶಗಳಿಂದ ಆಗಮಿಸಿ ಹೆಣ್ಣು ಮಕ್ಕಳನ್ನು ಹಣ ಕೊಟ್ಟು ಮದುವೆ ಮಾಡಿಕೊಂಡು ಹೋಗುವವರ ಮೇಲೆ ನಿಗಾ ವಹಿಸಬೇಕು. ಇದು ಮೋಸದ ಜಾಲವಾಗಿರುವದು ಅಧಿಕವಾಗಿದೆ ಎಂದರು.



ಮಾನವ ಕಳ್ಳ ಸಾಗಾಣಿಕೆ ಮಾಡುವುದರ ಮೂಲಕ ಮಾನವರ ಅಂಗಾಂಗ ತೆಗೆದು ಇತರರಿಗೆ ಮಾರುವುದು, ಇದರಿಂದ ಸಮಾಜ ಘಾತಕ ಕೆಲಸಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳುವ ಮೂಲಕ ಅಪರಾಧವೆಸಗುತ್ತಾರೆ. ಈ ಜಾಲವನ್ನು ಸಾರ್ವಜನಿಕರು ಗಮನಿಸಿ ಮಾಹಿತಿಯನ್ನು ಹತ್ತಿರದ ಪೊಲೀಸ್ ಠಾಣೆಗೆ ನೀಡುವ ಮೂಲಕ ಮಾನವ ಕಳ್ಳ ಸಾಗಾಣಿಕೆ ತಡೆಯಲು ಸಾರ್ವಜನಿಕರು ಭಾಗಿಯಾಗಬೇಕೆಂದರು.

ಡಿವೈಎಸ್‌ಪಿ ಮಹಾಂತೇಶ ಸಜ್ಜನರ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಸಮಾಜ ಕಲ್ಯಾಣ ಇಲಾಖೆಯ ಉಪನಿದೇಶಕಿ ನಂದಾ ಹಣಬರಟ್ಟಿ, ಡಾ. ವೈ.ಕೆ. ಭಜಂತ್ರಿ, ಶಿಕ್ಷಣ ಇಲಾಖೆಯ ಉಪಸಮನ್ವಯಾಧಿಕಾರಿ ಎಂ.ಎಚ್. ಕಾಂಬ್ಳಿ ಹಾಜರಿದ್ದರು. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸಹಾಯಕ ಕಾನೂನು ಅಭಿರಕ್ಷಕ ಗುರುರಾಜ ಗೌರಿ ಹಾಗೂ ಗದಗ ಸಿವಿಲ್ ಪೊಲೀಸ್ ಎಂ.ಎಫ್. ಅಸೂಟಿ ಉಪನ್ಯಾಸ ನೀಡಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಕರ ಪದ್ಮಾವತಿ ಜಿ ಸ್ವಾಗತಿಸಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಆರ್.ಜಿ. ಕಲ್ಲೂರ ಮಾತನಾಡಿ, ಸಮಾಜದಲ್ಲಿ ಹಲವರು ತಮ್ಮ ಮಕ್ಕಳನ್ನು ಭಿಕ್ಷಾಟನೆ ಮಾಡಿಸುವುದು, ಗೃಹ ಕೆಲಸ, ಮಾದಕ ವಸ್ತು ಸಾಗಾಣಿಕೆ ಮಾಡುವ ಮೂಲಕ ಅಪರಾಧ ಎಸಗುತ್ತಾರೆ. ಅವರಿಗೆ ಸರಿಯಾಗಿ ಜ್ಞಾನ ಒದಗಿಸುವ ಮೂಲಕ ಮಾನವ ಕಳ್ಳ ಸಾಗಾಣಿಕೆ ನಿಯಂತ್ರಿಸಬೇಕಿದೆ. ದೇಶ-ವಿದೇಶಗಳ ಸಮನ್ವಯತೆಯೊಂದಿಗೂ ಸಹ ಮಾನವ ಕಳ್ಳ ಸಾಗಾಣಿಕೆ ತಡೆಗೆ ಮುಂದಾಗಬಹುದು ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಾನವನ ಹಕ್ಕು ವಂಚಿಸಿ ಕಳ್ಳ ಸಾಗಾಣಿಕೆ ಮಾಡುವುದು, ಶೋಷಣೆ ಮಾಡುವುದು ಅಕ್ಷಮ್ಯ ಅಪರಾಧ. ಇಂದಿನ ಸಮಾಜವನ್ನು ಬಾಧಿಸುತ್ತಿರುವ ಅತ್ಯಂತ ಭೀಕರ ಹಾಗೂ ಅಮಾನವೀಯ ಅಪರಾಧ ಇದಾಗಿದೆ. ಮಾನವ ಕಳ್ಳ ಸಾಗಾಣಿಕೆ ವಿರುದ್ಧ ಸಮೂಹ ಚಟುವಟಿಕೆಗಳು ಶಾಲಾ ಮಟ್ಟದಿಂದಲೇ ಶಿಕ್ಷಣ ಹಾಗೂ ಕಟ್ಟುನಿಟ್ಟಾದ ಕ್ರಮಗಳ ಮೂಲಕ ಈ ಅಪರಾಧಗಳನ್ನು ತಡೆಹಿಡಿಯಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

### ಸ್ವಾತಂತ್ರ್ಯೋತ್ಸವ ದಿನಾಚರಣೆಯ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸೋಣ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ವಿವಿಧ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸ್ವಾತಂತ್ರ್ಯೋತ್ಸವ ದಿನಾಚರಣೆ ಕುರಿತು ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯೋತ್ಸವ ದಿನಾಚರಣೆಯ ಹಿಂದಿನ ದಿನ ಆಗಸ್ಟ್ 14 ಹಾಗೂ ಸ್ವಾತಂತ್ರ್ಯೋತ್ಸವದ ದಿನ ಆಗಸ್ಟ್ 15ರಂದು ನಗರದ ಪ್ರಮುಖ ವೃತ್ತಗಳಲ್ಲಿ, ಜಿಲ್ಲಾಡಳಿತ ಭವನದ ಸೇರಿದಂತೆ ವಿವಿಧ ಸರ್ಕಾರಿ ಕಟ್ಟಡಗಳಿಗೆ ಸೂಕ್ತ ದೀಪಾಲಂಕಾರವಾಗಬೇಕು ಎಂದರು.

ಸ್ವಾತಂತ್ರ್ಯೋತ್ಸವ ದಿನಾಚರಣೆ ಪ್ರಯುಕ್ತ ಆಗಸ್ಟ್ 15ರಂದು ಬೆಳಿಗ್ಗೆ 8 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾಧಿಕಾರಿಗಳಿಂದ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದೆ. ನಂತರ ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದ್ದು, ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸುವರು. ಅಂದು ಕಾರ್ಯಕ್ರಮ ಪ್ರಾರಂಭವಾಗುವದಕ್ಕಿಂತ ಮುಂಚೆಯೇ ಎಲ್ಲ ಶಾಲಾ ಕಾಲೇಜು ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಎಲ್ಲ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಕಡ್ಡಾಯವಾಗಿ ಕ್ರೀಡಾಂಗಣದಲ್ಲಿ ಹಾಜರಿರಬೇಕು. ನಗರದ ಜಿಲ್ಲಾ ಕ್ರೀಡಾಂಗಣ ಹಾಗೂ ಪ್ರಮುಖ ವೃತ್ತಗಳ ಸ್ವಚ್ಛತೆಗೆ ನಗರಸಭೆ ಪೌರಾಯುಕ್ತರು ಕ್ರಮ ವಹಿಸಬೇಕು ಎಂದು ಸೂಚಿಸಿದರು.



ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಮಾತನಾಡಿ, ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮದ ಸಂದರ್ಭದಲ್ಲಿ ವಿವಿಧ ರಂಗಗಳಲ್ಲಿ ಸಾಧನೆ ಮಾಡಿದವರ ಸನ್ಮಾನಕ್ಕೆ ಆಯಾ ಇಲಾಖಾಧಿಕಾರಿಗಳು ಕ್ರಮ ವಹಿಸಬೇಕು. ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು ತಮಗೆ ವಹಿಸಿದ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದರು.

ಸಭೆಯಲ್ಲಿ ಶಿಷ್ಟಾಚಾರದನುಸಾರ ಆಮಂತ್ರಣ ಪತ್ರಿಕೆ ಮುದ್ರಣ, ಅಲ್ಪೋಪಹಾರದ ವ್ಯವಸ್ಥೆ, ಪರೇಡ್ ವ್ಯವಸ್ಥೆ, ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ, ಧ್ವನಿವರ್ಧಕ, ವಿದ್ಯುತ್ ಸರಬರಾಜು ಸೇರಿದಂತೆ ಕಾರ್ಯಕ್ರಮದ ವೇದಿಕೆ ವ್ಯವಸ್ಥೆ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಡಿವೈಎಸ್‌ಪಿ ಮಹಾಂತೇಶ ಸಜ್ಜನರ, ವಿದ್ಯಾನಂದ ನಾಯಕ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರಿಗೌಡ್ರ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ ಹೆಗ್ಗಳಗಿ, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎ.ಎ. ಕಂಬಾಳಿಮಠ, ಪ.ಪೂ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಸನಾಯಕ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಬರಟ್ಟಿ, ನಗರಸಭೆ ಪೌರಾಯುಕ್ತ ರಾಜಾರಾಮ ▸▸3ನೇ ಪುಟಕ್ಕೆ

ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಜರುಗಲಿದ್ದು, ಗಣ್ಯ ವ್ಯಕ್ತಿಗಳಿಗೆ ಶಿಷ್ಟಾಚಾರದನ್ವಯ ಆಸನದ ವ್ಯವಸ್ಥೆಗೆ ಕ್ರಮ ಕೈಗೊಳ್ಳಬೇಕು. ನಗರದ ಜಿಲ್ಲಾ ಕ್ರೀಡಾಂಗಣ ಸೇರಿದಂತೆ ಪ್ರಮುಖ ಬೀದಿ ಹಾಗೂ ವೃತ್ತಗಳ ಸ್ವಚ್ಛತೆ ಕುರಿತು ನಗರಸಭೆ ಪೌರಾಯುಕ್ತರು ನಿಗಾ ವಹಿಸಬೇಕು. ಕಾರ್ಯಕ್ರಮದ ದಿನ ತುರ್ತು ಸೇವೆಗಾಗಿ ಅಂಬುಲೆನ್ಸ್‌ನ ವ್ಯವಸ್ಥೆಗೆ ಕ್ರಮ ವಹಿಸಬೇಕು. ಒಟ್ಟಾರೆಯಾಗಿ ರಾಷ್ಟ್ರೀಯ ಹಬ್ಬವಾದ ಸ್ವಾತಂತ್ರ್ಯೋತ್ಸವ ಸಮಾರಂಭವನ್ನು ಶ್ರದ್ಧೆ ಹಾಗೂ ಆಸಕ್ತಿಯಿಂದ ಆಚರಿಸಲು ಕ್ರಮ ವಹಿಸಬೇಕು.

– ಸಿ.ಎನ್. ಶ್ರೀಧರ್.
ಗದಗ ಜಿಲ್ಲಾಧಿಕಾರಿಗಳು.

### ರಾಜ್ಯ ರೈತ ಸಂಘ, ಹಸಿರು ಸೇನೆಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ

# ಯೂರಿಯಾ ಸಮರ್ಪಕ ವಿತರಣೆಗೆ ಕ್ರಮ ಕೈಗೊಳ್ಳಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಗೆ ಸಮರ್ಪಕವಾಗಿ ರಸಗೊಬ್ಬರ ಪೂರೈಸುವ ಕುರಿತು ಮತ್ತು ಬೆಳೆ ವಿಮೆಯಲ್ಲಿ ಏಜೆಂಟರ ಹಾವಳಿ ತಪ್ಪಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಶಂಕರಗೌಡ ಜಯನಗೌಡರ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಶಂಕರಗೌಡ ಜಯನಗೌಡರ ಮಾತನಾಡಿ, ಈಗಾಗಲೇ ಗೋವಿನಜೋಳ, ಹೆಸರು, ತೊಗರಿ, ಈರುಳ್ಳಿ, ಮೆಣಸಿನಕಾಯಿ ಇತ್ಯಾದಿ ಬೆಳೆಗಳಿಗೆ ಯೂರಿಯಾ, ಡಿ.ಎ.ಪಿ ಅಗತ್ಯತೆಯಿದೆ. ಇದನ್ನೇ ಬಂಡವಾಳ ಮಾಡಿಕೊಂಡು ಕೆಲ ಗೊಬ್ಬರದ ವ್ಯಾಪಾರಿಗಳು ಗೊಬ್ಬರದ ಜೊತೆಗೆ ಕ್ರಿಮಿನಾಶಕ ಉತ್ಪನ್ನಗಳನ್ನು ರೈತರಿಗೆ ಕೊಳ್ಳುವಂತೆ ತಾಕೀತು ಮಾಡುತ್ತಿದ್ದಾರೆ. ಇದು ರೈತರಿಗೆ ಹೊರೆಯಾಗಿದೆ. ಜಿಲ್ಲೆಯಲ್ಲಿ ರಸಗೊಬ್ಬರ ಕಾಳಸಂತೆ ಮಾರಾಟವಾಗುತ್ತಿದೆ. ಕೂಡಲೇ ಇಂತಹವರನ್ನು ಪತ್ತೆ ಹಚ್ಚಿ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದರು.

ಈಗಾಗಲೇ ಮುಂಗಾರು ಹಂಗಾಮಿನಲ್ಲಿ ಬೆಳೆಗಳಿಗೆ 2025-26ನೇ ಸಾಲಿನ ಬೆಳೆವಿಮೆ ತುಂಬುತ್ತಿದ್ದಾರೆ. ನಿಜವಾದ ರೈತರಿಗೆ ಬೆಳೆವಿಮೆ ತಲುಪಿಸಬೇಕು. ಗದಗ ಜಿಲ್ಲೆಯಲ್ಲಿ ಕಮೀಷನ್ ಏಜೆಂಟರ ಹಾವಳಿ ಹೆಚ್ಚಾಗಿದೆ. ಕೂಡಲೇ ದಲ್ಲಾಳಿಗಳ ಹಾವಳಿಯನ್ನು ತಪ್ಪಿಸಲು ಸೂಕ್ತ ಕ್ರಮ ▸▸3ನೇ ಪುಟಕ್ಕೆ

### ಎಚ್‌ಪಿವಿ ಉಚಿತ ಲಸಿಕೆ ವಿತರಣೆ ಕಾರ್ಯಕ್ರಮದಲ್ಲಿ ಡಾ. ಮಧು ರೆಡ್ಡೆರ

# ಎಚ್‌ಪಿವಿ ಲಸಿಕೆಯನ್ನು ಸೌಭಾಗ್ಯವೆಂದು ಪರಿಗಣಿಸಿ

■ವಿಜಯಸಾಕ್ಷಿ ಸುದ್ದಿ, ರೋಣ

ಎಚ್‌ಪಿವಿ ಲಸಿಕೆಯನ್ನು ಹೆಣ್ಣು ಮಕ್ಕಳು ತಮ್ಮ ಸೌಭಾಗ್ಯ ಎಂದು ಪರಿಗಣಿಸಿ ಪಡೆಯಬೇಕು ಎಂದು ಚಿಕ್ಕ ಮಕ್ಕಳ ವೈದ್ಯೆ ಡಾ. ಮಧು ರೆಡ್ಡೆರ ಹೇಳಿದರು.

ಅವರು ಮಂಗಳವಾರ ಆರ್‌ಜಿಎಸ್ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ ಮಾತೋಶ್ರೀ ಬಸಮ್ಮ ಸಂಗನಗೌಡ್ರ ಪಾಟೀಲರ 21ನೇ ಪುಣ್ಯ ಸ್ಮರಣೆ ನಿಮಿತ್ತ ಜರುಗಿದ ಹೆಣ್ಣು ಮಕ್ಕಳಿಗೆ ಎಚ್‌ಪಿವಿ ಉಚಿತ ಲಸಿಕೆ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಎಚ್‌ಪಿವಿ ಲಸಿಕೆಯನ್ನು 9ರಿಂದ 14 ಮತ್ತು 15ರಿಂದ 19 ವರ್ಷದಯೊಳಗಿನ ಹೆಣ್ಣು ಮಕ್ಕಳು ಪಡೆಯುವುದು ಬಹಳ ಮುಖ್ಯವಾಗಿದೆ. ಕಾರಣ, ಈ ಲಸಿಕೆ ಗರ್ಭ ಕ್ಯಾನ್ಸರ್ ಸೇರಿದಂತೆ ಇತರೆ ರೋಗಗಳನ್ನು ತಡೆಗಟ್ಟುವ ಶಕ್ತಿಯನ್ನು ಹೊಂದಿದೆ. ಹೀಗಾಗಿ ಪಾಲಕರು ಭಯ ಪಡದೆ ತಮ್ಮ ಮಕ್ಕಳಿಗೆ ಲಸಿಕೆ ಪಡೆಯಲು ಪ್ರೋತ್ಸಾಹಿಸಬೇಕು ಎಂದರು.



ಕೇಂದ್ರ ಸರಕಾರ ಸಹ ಎಚ್‌ಪಿವಿ ಲಸಿಕೆಯನ್ನು ವಿತರಿಸುವ ಚಿಂತನೆ ನಡೆಸಿದ್ದು ಸ್ವಾಗತರ್ಹವಾಗಿದೆ. ಆದರೆ ನಮ್ಮ ರಾಜ್ಯದಲ್ಲಿ ಪ್ರಥಮ ಎನ್ನುವಂತೆ ರೋಣ ತಾಲೂಕಿನಲ್ಲಿ ಶಾಸಕ ಜಿ.ಎಸ್. ಪಾಟೀಲ ಉಚಿತವಾಗಿ ಎಚ್‌ಪಿವಿ ಲಸಿಕೆಯನ್ನು ನೀಡುತ್ತಿರುವುದು ಸ್ಮರಣೀಯವಾಗಿದೆ. ಕಾರಣ, ಎಚ್‌ಪಿವಿ ಲಸಿಕೆ ಬಡವರಿಗೆ ನಿಲುಕುವಂತಿಲ್ಲ ಎಂಬುದನ್ನು ಮನಗಂಡಿರುವ ಶಾಸಕರು ಹೆಣ್ಣು ಮಕ್ಕಳ ಆರೋಗ್ಯದ ದೃಷ್ಟಿಯಿಂದ ಸ್ವತಃ ಲಸಿಕೆಯನ್ನು ವಿತರಣೆ ಮಾಡುತ್ತಿರುವುದು ಸ್ವಾಗತರ್ಹವಾಗಿದೆ ಎಂದರು. ಡಾ. ಎಸ್.ಬಿ. ಲಕ್ಕೋಳ ಮಾತನಾಡಿ, ಎಚ್‌ಪಿವಿ ಲಸಿಕೆ ಬಗ್ಗೆ ದೇಶದ ಖ್ಯಾತ ವೈದ್ಯರು ಚರ್ಚೆ ನಡೆಸಿ, ಹೆಣ್ಣು ಮಕ್ಕಳ ಆರೋಗ್ಯದ ದೃಷ್ಟಿಯಿಂದ ಬಹು ಮುಖ್ಯ ಲಸಿಕೆ ಎಂದು ಖಚಿತಪಡಿಸಿದ್ದಾರೆ. ಆದ-ರೆ, ಲಸಿಕೆಯು 2300ರಿಂದ 15 ಸಾವಿರದವರೆಗೆ ಬೆಲೆ ಬಾಳುತ್ತದೆ. ಇಂತಹ ಲಸಿಕೆಯನ್ನು ಉಚಿತವಾಗಿ ನೀಡುವುದು ಸಾಧ್ಯವೇ ಎಂಬ ಅಭಿಪ್ರಾಯವಿದೆ. ಶಾಸಕ ಜಿ.ಎಸ್. ಪಾಟೀಲರು, ಮತಕ್ಷೇತ್ರದ ಹೆಣ್ಣು ಮಕ್ಕಳು ಆರೋಗ್ಯವಾಗಿರಬೇಕು ಎಂಬ ಉದ್ದೇಶದಿಂದ ಎಲ್ಲ ಹೆಣ್ಣು ಮಕ್ಕಳಿಗೂ ಎಚ್‌ಪಿವಿ ಲಸಿಕೆಯನ್ನು ವಿತರಿಸುತ್ತಿರುವುದು ಶ್ಲಾಘನೀಯ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಜ್ಯ ಖನಿಜ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ವಹಿಸಿದ್ದರು. ಪುರಸಭೆ ಅಧ್ಯಕ್ಷೆ ಬಸ್ಸಮ್ಮ ಕೊಪ್ಪದ, ಕೆಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಐ.ಎಸ್. ಪಾಟೀಲ, ಡಾ. ಕೆ.ಬಿ. ಧನ್ನೂರ, ಡಾ. ಬಾಕಳೆ, ಡಾ. ಶಕೀಲಅಹ್ಮದ ಕುಂದರಗಿ, ಡಾ. ಬಿ.ಎಸ್. ಭಜಂತ್ರಿ, ಡಾ. ಐ.ಬಿ. ಕೊಟ್ಟೂರಶೆಟ್ಟರ, ಡಾ. ಬಾನಿ ಮುಂತಾದವರು ಉಪಸ್ಥಿತರಿದ್ದರು. ಯೂಸುಫ್ ಇಟಗಿ ಸ್ವಾಗತಿಸಿ ನಿರೂಪಿಸಿದರು.

ಇಂದು ಸಾಂಕೇತಿಕವಾಗಿ ಎಚ್‌ಪಿವಿ ಲಸಿಕೆ ವಿತರಣೆ ಮಾಡಲಾಗಿದ್ದು, ರೋಣ, ಗಜೇಂದ್ರಗಡ ತಾಲೂಕು ಸೇರಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರಕಾರಿ ಆಸ್ಪತ್ರೆಗಳಲ್ಲಿ ಈ ಲಸಿಕೆಯನ್ನು ಹೆಣ್ಣು ಮಕ್ಕಳಿಗೆ ಉಚಿತವಾಗಿ ನೀಡಲಾಗುವುದು. ಪಾಲಕರು ಭಯ ಪಡದೆ ತಮ್ಮ ಮಕ್ಕಳ ಮುಂದಿನ ಆರೋಗ್ಯದ ದೃಷ್ಟಿಯಿಂದ ಲಸಿಕೆಯನ್ನು ಪಡೆಯುವಂತೆ ಪ್ರೋತ್ಸಾಹಿಸಬೇಕು.

– ಜಿ.ಎಸ್. ಪಾಟೀಲ.
ಶಾಸಕರು, ರೋಣ.

## ಸಂಪಾದಕೀಯ

# ಚುನಾವಣಾ ಕರ್ತವ್ಯಗಳಿಗೆ ಶಿಕ್ಷಕರ ಬದಲು ಪರ್ಯಾಯ ಸಿಬ್ಬಂದಿ: ಸ್ವಾಗತಾರ್ಹ ನಡೆ

ರಾಜ್ಯದಲ್ಲಿ ಶಾಲಾ ಶಿಕ್ಷಕರನ್ನು ಚುನಾವಣಾ ಕಾರ್ಯಗಳಿಗೆ ನಿಯೋಜಿಸುವುದರಿಂದ ತರಗತಿಗಳಿಗೆ ಆಗುತ್ತಿದ್ದ ಅಡಚಣೆಯ ಕುರಿತು ಸುದೀರ್ಘ ಕಾಲದಿಂದ ಚರ್ಚೆ ನಡೆಯುತ್ತಿತ್ತು. ಈಗ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಈ ಬಗ್ಗೆ ಮಹತ್ವದ ನಿರ್ಧಾರ ಕೈಗೊಂಡಿದ್ದು, ಇನ್ನು ಮುಂದೆ ಶಿಕ್ಷಕರ ಬದಲಿಗೆ ಇತರ ಇಲಾಖೆಗಳ ಅಧಿಕಾರಿಗಳು ಮತ್ತು ಬೋಧಕೇತರ ಸಿಬ್ಬಂದಿಯನ್ನು ಚುನಾವಣಾ ಕರ್ತವ್ಯಗಳಿಗೆ ನಿಯೋಜಿಸುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಶಿಕ್ಷಣವು ಯಾವುದೇ ಸಮಾಜದ ಭವಿಷ್ಯಕ್ಕೆ ಅಡಿಪಾಯ. ಶಿಕ್ಷಕರು ವಿದ್ಯಾರ್ಥಿಗಳ ಕಲಿಕೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ. ಆದರೆ, ಚುನಾವಣಾ ಕರ್ತವ್ಯಗಳಿಗಾಗಿ ಅವರನ್ನು ಶಾಲೆಗಳಿಂದ ದೂರ ಇರಿಸಿದಾಗ, ವಿದ್ಯಾರ್ಥಿಗಳ ಕಲಿಕೆಗೆ ನೇರವಾಗಿ ಧಕ್ಕೆಯಾಗುತ್ತದೆ. ಈಗಾಗಲೇ ಸಿಬ್ಬಂದಿ ಕೊರತೆ, ಮೂಲ ಸೌಕರ್ಯಗಳ ಕೊರತೆ ಇತ್ಯಾದಿ ಸಮಸ್ಯೆಗಳಿಂದ ಬಳಲುತ್ತಿರುವ ಅನೇಕ ಸರ್ಕಾರಿ ಶಾಲೆಗಳಲ್ಲಿ, ಶಿಕ್ಷಕರ ಅನುಪಸ್ಥಿತಿ ತರಗತಿಗಳನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸುವಂತೆ ಮಾಡುತ್ತದೆ. ಇದು ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಮತ್ತು ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ. ಈ ಹೊಸ ನಿರ್ಧಾರದಿಂದಾಗಿ, ಶಿಕ್ಷಕರು ತಮ್ಮ ಮೂಲ ಕರ್ತವ್ಯವಾದ ಬೋಧನೆಯ ಮೇಲೆ ಸಂಪೂರ್ಣವಾಗಿ ಗಮನ ಹರಿಸಲು ಸಾಧ್ಯವಾಗುತ್ತದೆ. ಇದು ಶಾಲಾ-ಕಾಲೇಜುಗಳಲ್ಲಿ ಶೈಕ್ಷಣಿಕ ವಾತಾವರಣವನ್ನು ಸುಧಾರಿಸಲು ಮತ್ತು ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟವನ್ನು ಹೆಚ್ಚಿಸಲು ಸಹಕಾರಿಯಾಗುತ್ತದೆ.

ಇತರ ಇಲಾಖೆಗಳ ಸಿಬ್ಬಂದಿ ಮತ್ತು ಬೋಧಕೇತರ ಸಿಬ್ಬಂದಿಯನ್ನು ಬಳಸಿಕೊಳ್ಳುವ ಮೂಲಕ, ಚುನಾವಣಾ ಪ್ರಕ್ರಿಯೆಗೂ ಅಡಚಣೆಯಾಗುವುದಿಲ್ಲ. ಇದು ಶಿಕ್ಷಣ ಕ್ಷೇತ್ರಕ್ಕೆ ಸರ್ಕಾರ ನೀಡಿದ ಪ್ರಾಮುಖ್ಯತೆಯನ್ನು ಎತ್ತಿ ತೋರಿಸುತ್ತದೆ ಮತ್ತು ಗುಣಮಟ್ಟದ ಶಿಕ್ಷಣ ನೀಡುವ ನಿಟ್ಟಿನಲ್ಲಿ ಒಂದು ಪ್ರಮುಖ ಹೆಜ್ಜೆಯಾಗಿದೆ. ಈ ನಿರ್ಧಾರವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ಈಗ ಎಲ್ಲಾ ಜಿಲ್ಲಾಧಿಕಾರಿಗಳ ಜವಾಬ್ದಾರಿಯಾಗಿದೆ.

**ದೇಶಾದ್ಯಂತ ವ್ಯಸನ ಮುಕ್ತ ಜಾಗೃತಿ ಮೂಡಿಸಿದ ಡಾ. ಮಹಾಂತ ಶಿವಯೋಗಿಗಳು | ಆಗಸ್ಟ್ 1 ವ್ಯಸನ ಮುಕ್ತ ದಿನಾಚರಣೆ**

# 'ವ್ಯಸನ ಮುಕ್ತ'ಕ್ಕಾಗಿ ದೃಢ ಸಂಕಲ್ಪ



ಸಮಾಜದಲ್ಲಿ ಯಾವೊಬ್ಬ ವ್ಯಕ್ತಿಯೂ ವ್ಯಸನಗಳಿಗೆ ದಾಸರಾಗಿ ಜೀವನವನ್ನು ಹಾಳು ಮಾಡಿಕೊಳ್ಳಬಾರದು. ಪ್ರತಿಯೊಬ್ಬರೂ ಉತ್ತಮ ಆರೋಗ್ಯ ಪಡೆದುಕೊಂಡು ನೆಮ್ಮದಿಯ ಜೀವನ ನಡೆಸಬೇಕೆನ್ನುವ ಆರೋಗ್ಯಕರ ಸಮಾಜದ ಪರಿಕಲ್ಪನೆ ಇಟ್ಟುಕೊಂಡು ವ್ಯಸನ ಮುಕ್ತ ಸಮಾಜಕ್ಕಾಗಿ 'ದೇಶಾದ್ಯಂತ ಜೋಳಿಗೆ ಕಾರ್ಯಕ್ರಮ' ಮೂಲಕ ಸಂಚರಿಸಿ, ವ್ಯಸನ ಹಾಗೂ ದುಶ್ಚಟಗಳ ಬಗ್ಗೆ ಜಾಗೃತಿ ಮೂಡಿಸಿದವರು ಲಿಂ. ಡಾ. ಮಹಾಂತ ಶಿವಯೋಗಿ ಅಜ್ಜನವರು.

ಉತ್ತರ ಕರ್ನಾಟಕದ ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಹಿಪ್ಪರಗಿ ಗ್ರಾಮದಲ್ಲಿ 1 ಆಗಸ್ಟ್ 1930ರಲ್ಲಿ ಜನಿಸಿದ ಡಾ. ಮಹಾಂತ ಶಿವಯೋಗಿಗಳು ತಮ್ಮ 10 ನೇ ವಯಸ್ಸಿನಲ್ಲೇ ಸನ್ಯಾಸಿ ಜೀವನವನ್ನು ಸ್ವೀಕರಿಸಿ, ಸವದಿಯ ವಿರಕ್ತ ಮಠದ ಚಿಕ್ಕ ಸ್ವಾಮಿಗಳಾದರು. ಇವರು ಕಾಶಿಯಲ್ಲಿ ಸಂಸ್ಕೃತ, ಹಿಂದಿ, ಯೋಗ, ಶಾಸ್ತ್ರೀಯ ಸಂಗೀತ, ಆಧ್ಯಾತ್ಮಿಕ ಪ್ರವಚನ ಹೀಗೆ ನಾನಾ ವಿಷಯಗಳಲ್ಲಿ ಪರಿಣಿತಿಯನ್ನು ಪಡೆದಿದ್ದರು.

1970ರಲ್ಲಿ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ 19ನೇ ಪೀಠಾಧಿಕಾರಿಗಳಾದ ಡಾ. ಮಹಾಂತ ಶಿವಯೋಗಿ ಅಜ್ಜನವರು ಬಳಿಕ ಉತ್ತರ ಕರ್ನಾಟಕದಿಂದ 'ವ್ಯಸನ ಮುಕ್ತ'ಕ್ಕಾಗಿ ದೃಢ ಸಂಕಲ್ಪ ತೊಟ್ಟು, 1975ಕ್ಕೆ ಆರಂಭಿಸಿದ 'ಮಹಾಂತ ಜೋಳಿಗೆ ಕಾರ್ಯಕ್ರಮ'ದಡಿ ದೇಶಾದ್ಯಂತ ಅಷ್ಟೇ ಅಲ್ಲದೇ ಇಂಗ್ಲೆಂಡ್ ಸೇರಿದಂತೆ ವಿದೇಶದಲ್ಲೂ ಸಂಚರಿಸಿ, 42 ವರ್ಷಗಳ ಕಾಲ ಮಾದಕ ಸೇವನೆ ಹಾಗೂ ದುಶ್ಚಟಗಳಿಂದ ಆರೋಗ್ಯದ ಮೇಲೆ ಬೀರುವ ದುಷ್ಪರಿಣಾಮದ ಕುರಿತು ಜಾಗೃತಿ ಮೂಡಿಸಿ, ತಮ್ಮ ಜೋಳಿಗೆ ಹಿಡಿದು ಜನರಲ್ಲಿನ ದುಶ್ಚಟಗಳ ಭಿಕ್ಷೆ ಬೇಡಿದರು.

ನಿರಂತರ ಅನ್ನ ದಾಸೋಹ, ವಚನ ಮಾಂಗಲ್ಯ, ದೇವದಾಸಿ ವಿಮೋಚನಾ ಸಂಸ್ಥೆ, ದೇವದಾಸಿಯರ ಮಕ್ಕಳಿಗೆ ಟ್ರಸ್ಟ್ ಸ್ಥಾಪನೆ, ನಿರುದ್ಯೋಗಿಗಳಿಗೆ ಮತ್ತು ವಿಧವೆಯರಿಗೆ ಕಾಯಕ ಸಂಜೀವಿನಿ ಸಂಸ್ಥೆ ಸ್ಥಾಪನೆ, ನಿಸರ್ಗ ಚಿಕಿತ್ಸೆ, ಯೋಗ ಕೇಂದ್ರ ಸ್ಥಾಪನೆ, ಶಾಖಾ ಮಠಗಳಿಗೆ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಯುವಕರಿಗೆ ಧರ್ಮ ಸಂಸ್ಕಾರ ನೀಡಿ ಪಟ್ಟಾಭಿಷೇಕ, ಮಹಿಳಾ ಸಾಧಕಿಯರಿಗೆ ಜಂಗಮ ದೀಕ್ಷೆ ನೀಡಿ ಮಠಾಧಿಕಾರಿಯನ್ನಾಗಿ ಮಾಡಿದ್ದು, ಮಠದ ನೂರಾರು ಎಕರೆ ಜಮೀನು ಆಯಾ ಗ್ರಾಮಗಳ ರೈತರಿಗೆ ಕೃಷಿ ಮಾಡಿ ಬದುಕಲು ಅನುಕೂಲ ನೀಡಿದರು.

ವಿಪರೀತ ಮದ್ಯಪಾನ ಸೇವನೆಯಿಂದ ಯುವಕನೊಬ್ಬ ಸಾವನ್ನಪ್ಪಿದ ಸುದ್ದಿ ತಿಳಿದು ಕುಟುಂಬಕ್ಕೆ ಸಾಂತ್ವಾನ ಹೇಳಲು ಅವನ ಕೇರಿಗೆ ತೆರಳಿದ್ದ ಶ್ರೀಗಳು, ಅಲ್ಲಿ ಮೃತ ಯುವಕನ ಧರ್ಮಪತ್ನಿ ಹಾಗೂ ಮಕ್ಕಳು ಉಪವಾಸದಿಂದ ಕಣ್ಣೀರು ಹಾಕುತ್ತಿರುವುದು ಕಂಡರು. ಇದೇ ರೀತಿ ಸಾವಿರಾರು ಕುಟುಂಬಗಳಲ್ಲಿ ಗಂಡಂದಿರು ಮದ್ಯಪಾನ ಸೇವನೆ ಹಾಗೂ ಮಾದಕ ವಸ್ತುಗಳ ವ್ಯಸನಕ್ಕೆ ದಾಸರಾಗಿ ಸಾವಿಗೀಡಾಗುತ್ತಿದ್ದಾರೆ. ಇದರಿಂದ ಹೆಂಡತಿ, ಮಕ್ಕಳು ಸೇರಿ ಕುಟುಂಬಸ್ಥರು ಬೀದಿ ಪಾಲಾಗುತ್ತಿದ್ದಾರೆ. ಇಂತಹ ದುಶ್ಚಟಗಳಿಗೆ ಜೀವನ ಹಾಳಾಗಿಸಿಕೊಳ್ಳುತ್ತಿರುವದನ್ನು ನಿರ್ಮೂಲನೆ ಮಾಡಲು 'ಮಹಾಂತ ಜೋಳಿಗೆ' ಆರಂಭಿಸಿದರು.

1967ರಲ್ಲಿ ಹಾವೇರಿಯ ಹುಕ್ಕೇರಿ ಮಠದಿಂದ 'ಅಭಿನವ ಚನ್ನಬಸವಣ್ಣ', 1968ರಲ್ಲಿ ದಾವಣಗೆರೆಯ ಗಾನಯೋಗಿ ಪುಟ್ಟರಾಜ ಗವಾಯಿಗಳ ಪುರಾಣ ಸಮಿತಿಯಿಂದ 'ಕಾಯಕನಿಷ್ಠ ಶಿವಯೋಗಿ', 1969ರಲ್ಲಿ ಬಾಗಲಕೋಟೆಯ ನಾಗರಿಕರಿಂದ 'ಪ್ರವಚನ ಪ್ರವೀಣ', 1990ರಲ್ಲಿ ಚಿತ್ತರಗಿ-ಇಳಕಲ್ಲ ಸದ್ಭಕ್ತರಿಂದ 'ಶಿವಾನುಭವ ಚರವರ್ಯ', 1971ರಲ್ಲಿ ರಾವೂರ(ಚಿತ್ತಾಪುರ) ಭಕ್ತರಿಂದ 'ವೀರಶೈವ ತತ್ವವೆತ್ತ ಸಮಾಜ ಸಂಘಟಕ ಪ್ರಶಸ್ತಿ'ಗಳು ಸಂದಿವೆ. 2006ರಲ್ಲಿ ಗದಗ-ಬೆಟಗೇರಿಯ ಅಂಬಿಗೇರ ಪ್ರತಿಷ್ಠಾನದಿಂದ 'ಗಣಾಚಾರ ಪ್ರಶಸ್ತಿ', ಅಥಣಿಯ ಕನಕದಾಸ ಸಾಹಿತ್ಯ-ಸಂಸ್ಕೃತಿ ವೇದಿಕೆಯಿಂದ 'ಕನಕಶ್ರೀ ಪ್ರಶಸ್ತಿ', 2007ರಲ್ಲಿ ಬಾಗಲಕೋಟೆ ಬಸವೇಶ್ವರ ವಿದ್ಯಾವರ್ಧಕ ಸಂಘದಿಂದ 'ನಾಡಿನ ಪುಣ್ಯದ ಶಿವಯೋಗಿ ಪ್ರಶಸ್ತಿ', 2018ರಲ್ಲಿ ಟಿವಿ9 ವಾಹಿನಿಯಿಂದ 'ಯೋಗರತ್ನ ಪ್ರಶಸ್ತಿ' ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳು ಹಾಗೂ ಮಠಮಾನ್ಯಗಳಿಂದ ಹಲವಾರು ಪ್ರಶಸ್ತಿಗಳಿಗೆ ಮಹಾಂತ ಶ್ರೀಗಳು ಭಾಜರಾಗಿದ್ದರು.

ವ್ಯಸನ ಮಕ್ತ ವ್ಯಕ್ತಿ, ಗ್ರಾಮ ಸೇರಿದಂತೆ ಇಡೀ ಮಾನವ ಸಮಾಜವೇ ದುಷ್ಚಟಗಳಿಂದ ಮುಕ್ತರಾಗಬೇಕು. ಎಲ್ಲ ಜನರು ಉತ್ತಮ ಆರೋಗ್ಯ ಪಡೆಯಬೇಕು ಎನ್ನುವ ಬಹು ಸಮಾಜಮುಖಿ ಉದ್ದೇಶದಿಂದ ಶ್ರಮಿಸಿದ ಡಾ. ಮಹಾಂತ ಶಿವಯೋಗಿ ಅಜ್ಜನವರು 2018ರಲ್ಲಿ ಶ್ರೀಗಳು ಅಪಾರ ಸಂಖ್ಯೆಯ ಭಕ್ತಗಣವನ್ನು ಬಿಟ್ಟು ಇಹಲೋಕವನ್ನು ತ್ಯಜಿಸಿ ಶಿವೈಕ್ಯರಾದರು.

ಲಿಂಗೈಕ್ಯ ಡಾ. ಮಹಾಂತ ಶಿವಯೋಗಿ ಅಜ್ಜನವರು ದೇಶ-ವಿದೇಶಗಳಲ್ಲಿ ಸಂಚರಿಸಿ, ಜನರಲ್ಲಿ ವ್ಯಸನ ಮುಕ್ತ ಸಮಾಜ ನಿರ್ಮಾಣದ ಜನಜಾಗೃತಿ ಮೂಡಿಸಲು ಶ್ರಮಿಸಿದ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಸರ್ಕಾರ ಪ್ರತಿ ವರ್ಷವೂ ಶ್ರೀಗಳ ಜನ್ಮದಿನವಾದ ಆಗಸ್ಟ್ 1ನ್ನು 'ವ್ಯಸನ ಮುಕ್ತ ದಿನಾಚರಣೆ'ಯನ್ನಾಗಿ ರಾಜ್ಯಾದ್ಯಂತ ಆಚರಿಸುವ ಮೂಲಕ ಶ್ರೀಗಳ ಸಮಾಜ ಸೇವೆ ಸ್ಮರಿಸಿಕೊಳ್ಳುತ್ತಾ, ಸಮಾಜದ ಯುವ ಜನತೆ ಮಾದಕ ವಸ್ತುಗಳ ಸೇವನೆ ಹಾಗೂ ದುಶ್ಚಟಗಳಿಗೆ ಅಂಟಿಕೊಳ್ಳದೇ ದೂರವಿದ್ದು, ಸಾರ್ವಜನಿಕರು ಆರೋಗ್ಯಯುತ ಬದುಕು ಕಟ್ಟಿಕೊಳ್ಳುವಂತೆ ಜಾಗೃತಿಯ ಸಂದೇಶ ಸಾರುತ್ತಿದೆ.

**-ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಗದಗ.**

# ವರುಣನ ಅಬ್ಬರಕ್ಕೆ ಸರ್ಕಾರಿ ಶಾಲೆಯ ಕಟ್ಟಡ ಕುಸಿತ: ತಪ್ಪಿದ ಭಾರೀ ಅನಾಹುತ!

**■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ**

ಜಿಲ್ಲೆಯಲ್ಲಿ ಸುರಿದ ಭಾರಿ ಮಳೆಯ ಪರಿಣಾಮ ಸಾಕಷ್ಟು ಅವಾಂತರಗಳು ಸೃಷ್ಟಿಯಾಗಿದ್ದು, ಇದೀಗ ನಿರಂತರ ಮಳೆಗೆ ಶಾಲಾ ಕಟ್ಟಡ ಕುಸಿತಗೊಂಡಿರುವ ಘಟನೆ ಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನ ದೇಮಿನಕೊಪ್ಪ ಗ್ರಾಮದಲ್ಲಿ ನಡೆದಿದೆ.

ಸರ್ಕಾರಿ ಕಿರಿಯ ಪ್ರಾಥಮಿಕ ಶಾಲಾ ಕಟ್ಟಡದ ಕೊಠಡಿ ಧರೆಗೆ ಉರುಳಿದ್ದು, ಬೆಳಗಿನ ಜಾವ ಶಾಲಾ ಕಟ್ಟಡ ಬಿದ್ದ ಹಿನ್ನೆಲೆ ಭಾರೀ ಅನಾಹುತ ತಪ್ಪಿದೆ.

# ಯುವನಿಧಿ ಯೋಜನೆಯ ಫಲಾನುಭವಿಗಳ ಗಮನಕ್ಕೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 05 ಗ್ಯಾರಂಟಿ ಯೋಜನೆಗಳಲ್ಲಿ 05ನೇ ಗ್ಯಾರಂಟಿ ಯೋಜನೆ ಯುವನಿಧಿ ಈ ಯೋಜನೆಯಲ್ಲಿ ಪದವಿಧರರಿಗೆ 3000ರೂ. ಮತ್ತು ಡಿಪ್ಲೋಮಾದವರಿಗೆ 1500ರೂ. ಗಳನ್ನು ನಿರುದ್ಯೋಗಿ ಭತ್ಯೆ ಯಾಗಿ ನೀಡುತ್ತಿದ್ದು, ಜನವರಿ-2023 ರ ನಂತರ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳಬಹುದು ಹಾಗೂ ಈಗಾಗಲೇ ನೋಂದಾಯಿಸಿಕೊಂಡು ಹಣ ಪಡೆಯುತ್ತಿರುವ ಅಭ್ಯರ್ಥಿಗಳಿಗೆ ವರ್ಷದಲ್ಲಿ 4 ಬಾರಿ ಸ್ವಯಂ ಘೋಷಣೆಯನ್ನು ನೀಡಬೇಕು. ಪ್ರತಿ ಮೂರು ತಿಂಗಳಿಗೊಮ್ಮೆ ದಿ: 25 ರೊಳಗಾಗಿ ಸ್ವಯಂ ಘೋಷಣೆಯನ್ನು ನೀಡಬೇಕು. ಮಾರ್ಚ್-2025, ಎಪ್ರಿಲ್, ಮೇ-2025 ಈ ಮೂರು ತಿಂಗಳ ಸ್ವಯಂ ಘೋಷಣೆಯನ್ನು ಮೇ-2025ರ ಮಾಹೆಯಲ್ಲಿ ಸ್ವಯಂ ಘೋಷಣೆಯನ್ನು ನೀಡಬೇಕು. ಹಾಗೂ ಜೂನ್-2025, ಜುಲೈ-2025 ವತ್ತು ಆಗಸ್ಟ್-2025 ಈ ಮೂರು ತಿಂಗಳ ಸ್ವಯಂ ಘೋಷಣೆಯನ್ನು ಆಗಸ್ಟ್-2025ರ ಮಾಹೆಯಲ್ಲಿ ನೀಡಬೇಕು, ಹಾಗೂ ಸೆಪ್ಟೆಂಬರ್- 2025, ಅಕ್ಟೋಬರ್-2025 ಮತ್ತು ನವೆಂಬರ್-2025ರ ಸ್ವಯಂ ಘೋಷಣೆಯನ್ನು ನವೆಂಬರ್-2025ರ ಮಾಹೆಯಲ್ಲಿ ನೀಡಬೇಕು ಮತ್ತು ಡಿಸೆಂಬರ್-2025, ಜನವರಿ- 2026, ಫೆಬ್ರವರಿ-2026ರ ಈ ಮೂರು ತಿಂಗಳ ಸ್ವಯಂ ಘೋಷಣೆಯನ್ನು ಫೆಬ್ರವರಿ-2026ರ ಮಾಹೆಯಲ್ಲಿ ನೀಡಬೇಕು. ಮತ್ತು ಸೇವಾ ಸಿಂಧು ಪೋರ್ಟಲ್ ಲಾಗಿನ್‌ನಲ್ಲಿ ಅರ್ಜಿ ಸ್ಥಿತಿಯನ್ನು ಪರಿಶೀಲಿಸಿ ದಾಖಲೆ ಪರಿಶೀಲನೆ ಬಾಕಿ ಉಳಿದಿರುವ ಅಭ್ಯರ್ಥಿಗಳು ಎಲ್ಲ ಮೂಲ ದಾಖಲೆಗಳೊಂದಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗೆ ಖುದ್ದಾಗಿ ಸಂಪರ್ಕಿಸಿ ತಮ್ಮ ದಾಖಲೆಗಳನ್ನು ಪರಿಶೀಲಿಸಿ ದೃಢೀಕರಿಸಿಕೊಳ್ಳಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08372-220609. ಗೆ ಸಂಪರ್ಕಿಸಬಹುದಾಗಿದೆ.

# ನಿಮ್ಮಲ್ಲಿರುವ ಕಲೆಗೆ ಜೀವ ನೀಡಿ



**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಭಗವಂತ ಪ್ರತಿಯೊಬ್ಬರಿಗೂ ಒಂದು ಕಲೆಯನ್ನು ಕೊಟ್ಟಿರುತ್ತಾನೆ. ಅದನ್ನು ನೀವು ಗುರುತಿಸಿಕೊಳ್ಳಿ. ಅದನ್ನು ಪೋಷಿಸಿ, ನಿಮ್ಮ ಭವಿಷ್ಯಕ್ಕೆ ಬಳಸಿಕೊಳ್ಳಿ. ಯಾವುದೇ ಕಾರಣಕ್ಕೂ ನಿಮ್ಮಲ್ಲಿರುವ ಪ್ರತಿಭೆಯನ್ನು ಕಮರಿಸಬೇಡಿ ಎಂದು ಜಾನಪದ ಕಲಾವಿದ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಶಂಕ್ರಣ್ಣ ಸಂಕಣ್ಣವರ ಹೇಳಿದರು.

ಪಟ್ಟಣದ ಡಾ. ಅಭಿನವ ಅನ್ನದಾನೇಶ್ವರ ಪಿಯು ಕಾಲೇಜಿನ ಸಾಂಘಿಕ ಚಟುವಟಿಕೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಿಮ್ಮಲ್ಲಿನ ಕಲೆಗೆ ನೀವೇ ಜೀವ ತುಂಬಬೇಕು. ಅದಕ್ಕೆ ಅವಕಾಶ ಸಿಕ್ಕಾಗಲೆಲ್ಲ ಯಾವುದೇ ನಾಚಿಕೆ, ಹಿಂಜರಿಕೆ ಪಡದೆ ಅದನ್ನು ಪ್ರದರ್ಶಿಸಬೇಕು. ಮೊದಮೊದಲು ತಪ್ಪುವುದು ಸಹಜ. ಆದರೆ ನೀವು ಛಲ ಬಿಡದೆ ಅದನ್ನು ಮುಂದುವರೆಸಿಕೊಂಡು ಹೋದರೆ ಮುಂದೊಂದು ದಿನ ಅದು ನಿಮ್ಮ ಕೈ ಹಿಡಿಯುತ್ತದೆ. ನಿಮ್ಮಲ್ಲಿನ ಕಲೆಯನ್ನು ಪ್ರೋತ್ಸಾಹಿಸುವುದಕ್ಕೆಂದೇ ಶಾಲೆ-ಕಾಲೇಜುಗಳಲ್ಲಿ ಸಾಂಘಿಕ ಚಟುವಟಿಕೆಗಳನ್ನು ನಡೆಸಲಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಸಂಸ್ಥೆಯ ಆಡಳಿತಾಧಿಕಾರಿ ಎನ್. ಆರ್. ಗೌಡರ ಮಾತನಾಡಿ, ಕಾಲೇಜು ಜೀವನ ಬಹಳ ಮಹತ್ವದ್ದು. ನಿಮ್ಮ ಭವಿಷ್ಯಕ್ಕೆ ಭದ್ರ ಬುನಾದಿ ಹಾಕುವ ಈ ಸಮಯವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದರು.

ಶೈಕ್ಷಣಿಕ ಸಲಹೆಗಾರ ಬಿ.ಎಸ್. ಗೌಡರ ಮಾತನಾಡಿ, ಶಾಲೆ-ಕಾಲೇಜುಗಳಲ್ಲಿ ತಮ್ಮ ಪ್ರತಿಭೆ ತೋರಿದ ಅದೆಷ್ಟೋ ಜನರು ಮುಂದೆ ದೊಡ್ಡ ಕಲಾವಿದರಾಗಿ ಮಿಂಚಿದ ಅನೇಕ ಉದಾಹರಣೆಗಳಿವೆ. ನೀವೂ ಸಹ ನಿಮ್ಮಲ್ಲಿನ ಕಲಾವಿದನನ್ನು ಗುರುತಿಸಿಕೊಂಡು ಜೀವನದಲ್ಲಿ ಉನ್ನತಿ ಪಡೆಯಿರಿ ಎಂದರು.

ಕಾಲೇಜಿನ ಚೇರಮನ್ ಸಿ.ಎಸ್. ಚಕ್ಕಡಿಮಠ ಅಧ್ಯಕ್ಷತೆ ವಹಿಸಿದ್ದರು. ಸಭೆಯನ್ನುದ್ದೇಶಿಸಿ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಎಸ್.ಎ. ಪದವಿ ಕಾಲೇಜು ಚೇರಮನ್ ಎಸ್.ಎ. ಪಾಟೀಲ, ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ, ಪಿಯು ಕಾಲೇಜು ಪ್ರಾಚಾರ್ಯ ವೈ.ಸಿ. ಪಾಟೀಲ ಮಾತನಾಡಿದರು. ಸದಸ್ಯರಾದ ಎಂ.ಪಿ. ತಳಬಾಳ, ಬಸವರಾಜ ಹೊನವಾಡ, ಅಂದಾನಯ್ಯ ಮುಷ್ಟಿಗೇರಿ, ಪ್ರಾಚಾರ್ಯೆ ಅನಸೂಯಾ ಪಾಟೀಲ ವೇದಿಕೆಯ ಮೇಲಿದ್ದರು. ಉಪನ್ಯಾಸಕ ಬಿ.ಎಸ್. ಗಾಣಿಗೇರ ಸ್ವಾಗತಿಸಿದರು.

**ಕನ್ನಡಾಂಬೆಗೆ ಗಾನ ನಮನ, ಕನ್ನಡಪರ ಸಂಘಟಕರಿಗೆ ಸನ್ಮಾನ ಸಮಾರಂಭದಲ್ಲಿ ಚನ್ನವೀರ ಶ್ರೀಗಳು**

# ಕನ್ನಡ ನಮ್ಮ ಬದುಕಿನ ಭಾಷೆ



ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಕನ್ನಡ ಸಾರಸ್ವತ ಲೋಕಕ್ಕೆ ಆದಿಕವಿ ಕವಿ ಪಂಪನ ಸಾಹಿತ್ಯದ ಕ್ಷೇತ್ರ ಪುಲಿಗೆರೆಯ ತಿರುಳ್ಗನ್ನಡ ನಾಡಿನ ಕೊಡುಗೆ ಅಪಾರ. ಕನ್ನಡದ ತವರು ನೆಲ ಪುಲಿಗೆರೆ ನಾಡಿನಲ್ಲಿ ಜನಿಸಿದ ನಾವೆಲ್ಲ ಧನ್ಯರು. ಕನ್ನಡದ ಶ್ರೀಮಂತಿಕೆ, ಕನ್ನಡದ ಅಸ್ಮಿತೆ ವಿಜೃಂಭಿಸಲು ಕಂಕಣಬದ್ಧರಾಗಬೇಕಿದೆ ಎಂದರು.

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕನ್ನಡ ಎಂಬುದು ಬರೀ ಭಾಷೆಯಲ್ಲ. ಅದು ಈ ನೆಲದ ಸಂಸ್ಕೃತಿ, ಸಂಸ್ಕಾರ, ಪರಂಪರೆ ಸಾರುವ ಶಕ್ತಿಯಾಗಿದೆ. ಪ್ರತಿಯೊಬ್ಬ ಕನ್ನಡಿಗರಲ್ಲೂ ಕನ್ನಡ ಭಾಷೆ, ಸಾಹಿತ್ಯ, ಸಂಗೀತ, ಚಿತ್ರಕಲೆ, ನೆಲ, ಜಲದ ಬಗ್ಗೆ ಅಭಿಮಾನ, ಸ್ವಾಭಿಮಾನ ಅಂತರ್ಗತವಾಗಿರಬೇಕು ಎಂದು ಹೂವಿನಶಿಗ್ಲಿ ಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ಅವರು ಭಾನುವಾರ ಪಟ್ಟಣದ ಚನ್ನಮ್ಮನವನ ಕಲ್ಯಾಣ ಮಂಟಪದಲ್ಲಿ ಪಟ್ಟಣದ ಸರಿಗಮಪ ರಾಗರಂಜನಿ ಮತ್ತು ವಿವಿಧ ಸಂಘಟನೆಗಳಿಂದ ನಡೆದ ಕನ್ನಡಾಂಬೆಗೆ ಗಾನ ನಮನ ಮತ್ತು ಕನ್ನಡಪರ ಸಂಘಟಕರಿಗೆ ಸನ್ಮಾನ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಕನ್ನಡ ನಮ್ಮ ಬದುಕಿನ, ಅನ್ನದ ಭಾಷೆಯಾಗಿ ನಿತ್ಯದ ಜೀವನದಲ್ಲಿ ಬಳಕೆಯಾಗುತ್ತಿದೆ. ಶಾಲಾ ಹಂತದಲ್ಲಿಯೇ ಮಕ್ಕಳಲ್ಲಿ ಕನ್ನಡದ ಬಗ್ಗೆ ಗೌರವಾಭಿಮಾನ-ಸ್ವಾಭಿಮಾನ ಮೂಡಿಸುವಲ್ಲಿ ಪಾಲಕ, ಶಿಕ್ಷಕ ಮತ್ತು ಕನ್ನಡಪರ ಸಂಘಟನೆಗಳ ಜವಾಬ್ದಾರಿ ಹೆಚ್ಚಿದೆ. ಕನ್ನಡ ನಾಡಿನ ದೇದೀಪ್ಯಮಾನವಾದ ಇತಿಹಾಸವನ್ನು ಬಾಲ್ಯದಲ್ಲಿಯೇ ಮಕ್ಕಳಲ್ಲಿ ಅರುಹಿದರೆ ಅವರ ಎದೆಯಾಂತರಾಳದಲ್ಲಿ ಕನ್ನಡದ ಬಗ್ಗೆ ಅಭಿಮಾನ, ಸ್ವಾಭಿಮಾನ, ಗರ್ವ ಮೇಳೈಸುತ್ತದೆ ಎಂದರು. ಮಾಜಿ ಶಾಸಕ ರಾಮಣ್ಣ ಲಮಾಣಿ, ಗದಗ ನಗರಸಭೆ ಮಾಜಿ ಅಧ್ಯಕ್ಷೆ ಉಷಾ ದಾಸರ ಮತ್ತು ಅಧ್ಯಕ್ಷತೆ ವಹಿಸಿದ್ದ ಪಂಚಮಸಾಲಿ ಸಮಾಜದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ ಮಾತನಾಡಿದರು. ಎಂ.ಎನ್. ಬಾಡಗಿ, ಎಲ್.ಎಸ್. ಅರಳಹಳ್ಳಿ, ಶರಣು ಗೋಡಿ, ರವಿ ಲಿಂಗಶೆಟ್ಟಿ, ಮಹೇಶ ಕಲಘಟಗಿ, ನಾಗರಾಜ ಚಿಂಚಲಿ, ಸರೋಜಕ್ಕ ಬನ್ನೂರ, ಚಂದ್ರಶೇಖರ ನರಸಮ್ಮನವರ, ಸುರೇಶ ನಂದೆಣ್ಣವರ, ಫಕ್ಕಿರೇಶ ಭಜಕ್ಕನವರ, ಚಂದ್ರು ಮಾಗಡಿ, ಪೂರ್ಣಾಜಿ ಖರಾಟೆ, ಸಿ.ಜಿ. ಹಿರೇಮಠ, ಮೆಹಬೂಬ್ ಹುಸೇನ್, ಬಸವರಾಜ ಹಿರೇಮನಿ, ಟಿ.ಕೆ. ರಾಠೋಡ, ಜಾಕೀರ್‌ಹುಸೇನ್ ಹವಾಲ್ದಾರ, ಸುರೇಶ ಹಟ್ಟಿ, ಮಂಜು ಮುಳಗುಂದ, ಕಾವ್ಯಾ ದೇಸಾಯಿ, ಶೈಲಾ ಆದಿ, ಗೌರಮ್ಮ ಮರಡಿ, ಚಂದ್ರು ಮಾಗಡಿ, ಮಲ್ಲಿಕಾರ್ಜುನ ನೀರಾಲೋಟಿ ನಿರ್ವಹಿಸಿದರು.

# 64ನೇ ಶಿವಾನುಭವ ಗೋಷ್ಠಿ ಇಂದು

**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಹಾಲಕೆರೆಯ ಅನ್ನದಾನೇಶ್ವರ ಸಂಸ್ಥಾನಮಠ,ಗದಗಅಕ್ಷರಭಾರತ ಪ್ರತಿಷ್ಠಾನಹಾಗೂಅನ್ನದಾನವಿಜಯ ವಿದ್ಯಾಪ್ರಸಾರ ಸಮಿತಿ ನರೇಗಲ್ಲದ ಸಹಯೋಗದಲ್ಲಿಜುಲೈ31ರಂದು ಸಂಜೆ6.30ಕ್ಕೆಶ್ರೀಅನ್ನದಾನೇಶ್ವರ ಶಿವಾನುಭವಮಂಟಪದಲ್ಲಿ64ನೇ ಶಿವಾನುಭವಗೋಷ್ಠಿಜರುಗಲಿದೆ.

ಹಾಲಕೆರೆಸಂಸ್ಥಾನಮಠದಮುಪ್ಪಿನ ಬಸವಲಿಂಗ ಸ್ವಾಮೀಜಿ ಸಾನ್ನಿಧ್ಯ ವಹಿಸುವರು.ರೋಣರಾಜೀವಗಾಂಧಿ ಶಿಕ್ಷಣಮಹಾವಿದ್ಯಾಲಯದಸಹ ಪ್ರಾಧ್ಯಾಪಕಎಸ್.ಆರ್.ಐಹೊಳಿ 'ಜೀವನದಲ್ಲಿಪ್ರವಚನದಮಹತ್ವ' ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಬೆಣ್ಣೆಹಳ್ಳಕ್ಕೆ ಬ್ಯಾರೇಜ್ ನಿರ್ಮಿಸಲು ಆಗ್ರಹ



**■ ವಿಜಯಸಾಕ್ಷಿ ಸುದ್ದಿ, ಗದಗ**

ಉತ್ತರ ಕರ್ನಾಟಕದ ಹತ್ತಾರು ಹಳ್ಳಗಳು ಸೇರಿ ಬೃಹದಾಕಾರದಲ್ಲಿ ಹರಿಯುವ ಬೆಣ್ಣೆ ಹಳ್ಳದ ನೀರಿನಿಂದ ಪ್ರತಿವರ್ಷ ಲಕ್ಷಾಂತರ ಹೆಕ್ಟೇರ್ ಬೆಳೆ ಹಾನಿಯಾಗುತ್ತಿದ್ದು, ಸರಕಾರ ಬೆಣ್ಣೆ ಹಳ್ಳಕ್ಕೆ ಬ್ಯಾರೇಜ್ ನಿರ್ಮಿಸುವ ಮೂಲಕ ನೀರಿನ ಸದ್ಬಳಕೆ ಮಾಡಿಕೊಳ್ಳಲು ಅನುಕೂಲ ಮಾಡಿಕೊಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆಯ ಕೋಡಿಹಳ್ಳಿ ಚಂದ್ರಶೇಖರ ಬಣದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಶಂಕರಗೌಡ ಜಾಯನಗೌಡ್ರ ಆಗ್ರಹಿಸಿದರು.

ತಾಲೂಕಿನ ಸೊರಟೂರನಲ್ಲಿ ಗ್ರಾಮದಲ್ಲಿ ನಡೆದ ಗೋಲಿಬಾರ್ ಘಟನೆಯಲ್ಲಿ ಮೃತರಾದ ರೈತ ಹುತಾತ್ಮರ ಗದ್ದುಗೆಗೆ ಪೂಜೆ ನೆರವೇರಿಸಿ, ಶ್ರದ್ಧಾಂಜಲಿ ಸಲ್ಲಿಸಿ ಅವರು ಮಾತನಾಡಿ, ರೈತ ಹುತಾತ್ಮರಾದ ಮಹಾಲಿಂಗಪ್ಪ ಗಿಡ್ಡಕೆಂಚಣ್ಣವರ, ಚನ್ನಬಸಪ್ಪ ನಿರ್ವಾಣಶೆಟ್ಟರ, ದೇವಲಪ್ಪ ಲಮಾಣಿ ಅವರನ್ನು ಸ್ಮರಿಸಿದರು.

ರಾಜ್ಯದಲ್ಲಿ ಮುಂಗಾರು ಮಳೆ ಚುರುಕಾಗಿದ್ದು, ರೈತರಿಗೆ ಅಗತ್ಯವಾಗಿರುವ ಬಿತ್ತನೆ ಬೀಜ, ರಸಗೊಬ್ಬರ ಸಮರ್ಪಕವಾಗಿ ಪೂರೈಸಬೇಕು.

ತಕ್ಷಣ ರಾಜ್ಯ ಸರಕಾರ ರೈತರಿಗೆ ಅಗತ್ಯವಿರುವ ಗೊಬ್ಬರ ವಿತರಿಸಬೇಕು ಎಂದು ಶಂಕರಗೌಡ ಜಾಯನಗೌಡ್ರ ಒತ್ತಾಯಿಸಿದರು.

ಜಿಲ್ಲಾ ಘಟಕದ ಉಪಾಧ್ಯಕ್ಷ ರಾಮಣ್ಣ ಕಮ್ಮಾರ, ಜಿಲ್ಲಾ ಘಟಕದ ಸಂಚಾಲಕ, ಸಾಮಾಜಿಕ ಹೋರಾಟಗಾರ ಬಸವಣ್ಣೆಯ್ಯ ಹಿರೇಮಠ ಮಾತನಾಡಿದರು.

ಈ ಸಂದರ್ಭದಲ್ಲಿ ರೈತ ಸಂಘದ ಗದಗ ತಾಲೂಕು ಅಧ್ಯಕ್ಷ ಮಂಜುನಾಥ ಎಂ.ವಡ್ಡರ, ರೈತ ಮುಖಂಡರಾದ ಭದ್ರೇಶ ಕುಸ್ಲಾಪೂರ, ಬೂದಪ್ಪ ಹಳ್ಳಿ, ಚನ್ನವೀರಯ್ಯ ಹೊಸಮಠ, ಶಿವಜೋಗಯ್ಯ ಹಿರೇಮಠ, ಯಲ್ಲಪ್ಪ ಅಡ್ನೂರ, ಮಂಜುನಾಥಸ್ವಾಮಿ ಹಿರೇಮಠ, ಫಕ್ಕೀರೇಶ ಸುಗ್ರಿ, ವೀರೇಶ ಮಾಂಡ್ರೆ, ಮಂಜಣ್ಣ ಬುರ್ಲಿ, ಮುತ್ತಪ್ಪ ಹಟ್ಟಿ, ಮಹಾಂತೇಶ ಹಳ್ಳಿ, ಮಾರುತಿ ಹುಲಿಕಟ್ಟಿ, ವೀರಣ್ಣ ಗುಗ್ಗರಿ, ಹನಮಂತಪ್ಪ ಘೋಡಕೆ, ಕನಕಪ್ಪ ಬೇಗೂರ, ಫಕ್ಕೀರಪ್ಪ ತೋಪಿನ, ಮಲಕಾಜಪ್ಪ ಗಿಡ್ಡಕೆಂಚಣ್ಣವರ, ಪರಶುರಾಮ ಹೂಗಾರ ಸೇರಿದಂತೆ ರೈತ ಮುಖಂಡರು ಉಪಸ್ಥಿತರಿದ್ದರು.

**ಪಂಚಾಯತ ರಾಜ್ ವಿಭಾಗದ ಅಧಿಕಾರಿಗಳು, ನೌಕರರ ಸಂಘದ ರಾಜ್ಯಮಟ್ಟದ ವಾರ್ಷಿಕ ಮಹಾಸಭೆ**

# ಸಂಘದ ಹೋರಾಟವು ಅಚಲವಾಗಿದೆ



ಈ ಸಂದರ್ಭದಲ್ಲಿ ಚಿತ್ರದುರ್ಗ ಜಿಲ್ಲೆಯಿಂದ ರಾಜ್ಯಾಧ್ಯಕ್ಷರು, ಪದಾಧಿಕಾರಿಗಳು ಮತ್ತು ಹೊಸದಾಗಿ ನೇಮಕಗೊಂಡ ನಿರ್ದೇಶಕರನ್ನು ಸನ್ಮಾನಿಸಲಾಯಿತು. ಚಿತ್ರದುರ್ಗ ಜಿ.ಪಂ ಕಾರ್ಯಾಲಯದ ಸಹಾಯಕ ನಿರ್ದೇಶಕ ದಾದಾಪೀರ್, ವ್ಯವಸ್ಥಾಪಕ ಸುನೀಲ್, ಷಣ್ಮುಖ ಮತ್ತು ಇತರ ನೌಕರರನ್ನು ಸಂಘದ ವತಿಯಿಂದ ಗೌರವಿಸಲಾಯಿತು.

**■ ವಿಜಯಸಾಕ್ಷಿ ಸುದ್ದಿ, ಚಿತ್ರದುರ್ಗ**

ಸಾಧಿಸುವ ಛಲ, ತಾಳ್ಮೆ ಮತ್ತು ಪರಸ್ಪರ ನಂಬಿಕೆಯಿಂದ ಏನನ್ನು ಬೇಕಾದರೂ ಸಾಧಿಸಬಹುದು. ನಮ್ಮ ಸಂಘದ ಯಶಸ್ಸಿಗೆ ಇದು ಅತ್ಯುತ್ತಮ ಉದಾಹರಣೆ. ಈಗಾಗಲೇ ಸಾಧಿಸಿರುವುದು ಬಹಳಷ್ಟಿದ್ದರೆ, ಸಾಧಿಸಬೇಕಿರುವುದು ಇನ್ನೂ ಬೆಟ್ಟದಷ್ಟಿದೆ. ರಾಜ್ಯದ ವಿವಿಧ ಜಿಲ್ಲೆಗಳಿಂದ ಬಂದಿರುವ ನೌಕರರ ಸಲಹೆ ಮತ್ತು ಸಹಕಾರವು ಈ ದಿಶೆಯಲ್ಲಿ ಅತ್ಯಗತ್ಯ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆಯ ಪಂಚಾಯತ ರಾಜ್ ವಿಭಾಗದ ಅಧಿಕಾರಿಗಳು ಹಾಗೂ ನೌಕರರ ಸಂಘದ ರಾಜ್ಯಾಧ್ಯಕ್ಷ ಬಸವರಾಜ್ ಹೆಚ್ ಹೇಳಿದರು. ಚಿತ್ರದುರ್ಗದ ಜಿಲ್ಲಾ ಪಂಚಾಯಿತಿ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಸಂಘದ 2025-26ನೇ ಸಾಲಿನ ರಾಜ್ಯಮಟ್ಟದ ವಾರ್ಷಿಕ ಮಹಾಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲಾ ಮತ್ತು ತಾಲೂಕು ಪಂಚಾಯಿತಿಗಳಲ್ಲಿ ಶೇ.75ಕ್ಕೂ ಹೆಚ್ಚು ಲಿಪಿಕ ಹುದ್ದೆಗಳು ಖಾಲಿಯಿದ್ದರೂ, ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ವಿಳಂಬವಿಲ್ಲದೇ ಕೆಲಸ ನಿರ್ವಹಿಸುತ್ತಿದ್ದಾರೆ. ಖಾಲಿಯಿರುವ ಸಾವಿರಾರು ಹುದ್ದೆಗಳನ್ನು ಜರೂರಾಗಿ ಭರ್ತಿ ಮಾಡಲು ಸರ್ಕಾರದ ಗಮನವನ್ನು ಸೆಳೆಯಲಾಗುವುದು. ವಿವಿಧ ಸರ್ಕಾರಿ ನೌಕರರ ಜ್ಯೇಷ್ಠತೆ, ಮುಂಬಡ್ತಿ, ಹುದ್ದೆಗಳ ಉನ್ನತೀಕರಣ ಮತ್ತು ಮುಂಬಡ್ತಿಗೆ ನಿಗದಿಪಡಿಸಿರುವ ಅರ್ಹತಾ ಅವಧಿಯಲ್ಲಿ ಆಗಿರುವ ತಾರತಮ್ಯವನ್ನು ಹೋಗಲಾಡಿಸಲು ಸಂಘದ ಹೋರಾಟವು ಅಚಲವಾಗಿದ್ದು, ಸರ್ಕಾರದ ವಿಶ್ವಾಸವನ್ನು ಪಡೆದು ತಾರತಮ್ಯವನ್ನು ಸರಿಪಡಿಸಲಾಗುವುದು ಎಂದು ತಿಳಿಸಿದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ದೇವರಾಜ್ ಸಿ.ಸಜ್ಜನಶೆಟ್ಟರ್ ಮಾತನಾಡಿ, ಸಂಘದ ಅಧ್ಯಕ್ಷ ಬಸವರಾಜ್ ಹೆಚ್ ಮಾರ್ಗದರ್ಶನದಲ್ಲಿ 15-20 ವರ್ಷಗಳಿಂದ ಪದೋನ್ನತಿಯಿಲ್ಲದೇ ಸೊರಗಿದ್ದ ನೂರಾರು ನೌಕರರಿಗೆ 2020ರಲ್ಲಿ ರಚಿತವಾದ ವೃಂದ ಮತ್ತು ನೇಮಕಾತಿ ನಿಯಮಗಳ ಮೂಲಕ ಪದೋನ್ನತಿಯ ದಾರಿ ತೆರೆದಿದ್ದನ್ನು ಶ್ಲಾಘಿಸಿದರು.

ತಿಪ್ಪೇಸ್ವಾಮಿ ಪ್ರಾರ್ಥಿಸಿದರು. ಸಂಘದ ಉಪಾಧ್ಯಕ್ಷ ಭೈರೇಶ್ ವ್ಹಿ.ಎಸ್ ಕಾರ್ಯಕ್ರಮ ನಿರ್ವಹಿಸಿದರು. ಸಭೆಯಲ್ಲಿ ರಾಜ್ಯ ಉಪಾಧ್ಯಕ್ಷ ವೆಂಕಟೇಶ್ ತಿಮ್ಮನಾಯ್ಕರ್, ಜಯಪ್ರಕಾಶ್ ಚವ್ಹಾಣ್, ಡಿ. ಲಕ್ಷ್ಮೀಕಾಂತ, ಖಜಾಂಚಿ ಬಾಪುಗೌಡ ಪಾಟೀಲ್ ಸೇರಿದಂತೆ ನೂರಾರು ಅಧಿಕಾರಿಗಳು ಮತ್ತು ನೌಕರರು ಭಾಗವಹಿಸಿದ್ದರು.

# ಆಧಾರ್ ಕಾರ್ಡ್ ಪರಿಶೀಲಿಸಿ ರೈತರಿಗೆ ರಸಗೊಬ್ಬರ ವಿತರಿಸಿದ ಶಾಸಕ ಡಾ.ಚಂದ್ರು ಲಮಾಣಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ/ಗದಗ

ಜಿಲ್ಲೆಯಾದ್ಯಂತ ರಸಗೊಬ್ಬರದ ಅಭಾವ ಮುಂದುವರಿದಿದೆ. ಇಲ್ಲಿನ ರೈತರು ಗೊಬ್ಬರಕ್ಕಾಗಿ ಪರದಾಟ ನಡೆಸುತ್ತಿದ್ದು, ರಾತ್ರಿ– ಹಗಲು ಎನ್ನದೇ ರಸಗೊಬ್ಬರಕ್ಕಾಗಿ ಕ್ಯೂ ನಿಲ್ಲುತ್ತಿದ್ದಾರೆ. ಹೀಗಾಗಿ ಪೊಲೀಸರ ಕಾವಲಿನೊಂದಿಗೆ ರಣತೂರ ಗ್ರಾಮದಲ್ಲಿ ರೈತರಿಗೆ ಯೂರಿಯಾ ಗೊಬ್ಬರ ವಿತರಣೆ ಮಾಡಲಾಗುತ್ತಿದೆ. ಸ್ವತಃ ಬಿಜೆಪಿ ಶಾಸಕ ಡಾ. ಚಂದ್ರು ಲಮಾಣಿ ಅವರು, ರಣತೂರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದರು. ಬಳಿಕ ಕೌಂಟರ್ ನಲ್ಲಿ ಕುಳಿತು ಆಧಾರ್ ಕಾರ್ಡ್ ಪರಿಶೀಲನೆ ಮಾಡಿ ಗೊಬ್ಬರ ವಿತರಣೆ ಮಾಡಿದ್ದಾರೆ.

ಗದಗ ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ರಣತೂರ ಗ್ರಾಮದಲ್ಲಿ ನೂರಾರು ಸಂಖ್ಯೆಯಲ್ಲಿ ಗೊಬ್ಬರಕ್ಕಾಗಿ ರೈತರು ಜಮಾಯಿಸಿದ್ರಿಂದ ಯಾವುದೇ ಅಹಿತಕರ ಘಟನೆ ಸಂಭವಿಸಿದಂತೆ ಪೊಲೀಸ್ ಕಾವಲಿನಲ್ಲಿ ವಿತರಣೆ ಮಾಡಲಾಗಿದೆ. ಈ ಹಿಂದೆ ಗಲಾಟೆ ಆದ ಹಿನ್ನಲೆಯಲ್ಲಿ ಇದೀಗ ಪೊಲೀಸ್ ಭದ್ರತೆಯಲ್ಲಿ ವಿತರಣೆ ಮಾಡಲಾಗುತ್ತದೆ.

ಒಟ್ಟಾರೆ ರಾಜ್ಯದಲ್ಲಿ ರೈತರಿಗೆ ನಿಗದಿತ ಸಮಯದಲ್ಲಿ ಯೂರಿಯಾ ಗೊಬ್ಬರ ವಿತರಣೆ ಮಾಡುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದ್ದು, ರೈತರು ಆತಂಕದಲ್ಲಿದ್ದಾರೆ. ಶಿರಹಟ್ಟಿ ಮತಕ್ಷೇತ್ರದಲ್ಲಿಯೂ ಗೊಬ್ಬರದ ಅಭಾವ ಸಾಕಷ್ಟಿದೆ ಎಂದು ಶಾಸಕರು ಮಾಹಿತಿ ನೀಡಿದ್ದಾರೆ.



## ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಜ.ಫ. ದಿಂಗಾಲೇಶ್ವರ ಶ್ರೀಗಳು

# ಬರವಣಿಗೆಯ ಮೂಲಕ ಓದುಗರನ್ನು ಆಕರ್ಷಿಸಿ




■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸಮಾಜದ ಸ್ವಾಸ್ಥ್ಯ ಕಾಪಾಡುವಲ್ಲಿ ಪತ್ರಕರ್ತರ ಪಾತ್ರ ಪ್ರಮುಖವಾಗಿದೆ. ಈ ನಿಟ್ಟಿನಲ್ಲಿ ಪತ್ರಕರ್ತರು ಅಧ್ಯಯನಶೀಲರಾದಾಗ ತಮ್ಮ ವರದಿಗಳಿಗೆ ಹೆಚ್ಚಿನ ಮಹತ್ವ ಬರಲಿದೆ ಎಂದು ಶಿರಹಟ್ಟಿಯ ಶ್ರೀ ಜ.ಫ. ದಿಂಗಾಲೇಶ್ವರ ಸ್ವಾಮೀಜಿ ಹೇಳಿದರು.

ಅವರು ಬುಧವಾರ ಶಿರಹಟ್ಟಿಯ ಶ್ರೀ ಮಹರ್ಷಿ ವಾಲ್ಮೀಕಿ ಸಮುದಾಯ ಭವನದಲ್ಲಿ ತಾಲೂಕಾ ಮಟ್ಟದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಇತ್ತೀಚೆಗೆ ಪತ್ರಿಕೆಗಳಲ್ಲಿ ಬರುವ ಸುದ್ದಿಗಳ ಗುಣಮಟ್ಟ ಕಡಿಮೆಯಾಗುತ್ತಿದೆ. ವಸ್ತುನಿಷ್ಠ ಬರಹಗಳಿಗೆ ಬರ ಬಂದಂತಾಗುತ್ತಿರುವುದು ಕಳವಳಕಾರಿಯಾಗಿದ್ದು, ಓದುಗರ ಸಂಖ್ಯೆಯೂ ಕಡಿಮೆಯಾಗುತ್ತಿದೆ. ಆದ್ದರಿಂದ ನಿಮ್ಮ ಬರವಣಿಗೆಯ ಮೂಲಕ ಓದುಗರನ್ನು ಆಕರ್ಷಿಸುವ ಕೆಲಸವಾಗಬೇಕು. ಯಾವುದೇ ಒತ್ತಡಕ್ಕೆ ಒಳಗಾಗದೇ ವಸ್ತುನಿಷ್ಠ ಬರವಣಿಗೆಯ ಮೂಲಕ ಸಮಾಜದಲ್ಲಿ ಸ್ವಾಸ್ಥ್ಯವನ್ನು ಕಾಪಾಡಬೇಕೆಂದು ಹೇಳಿದರು.

ಮಾಜಿ ಶಾಸಕರಾದ ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಜಿಲ್ಲಾ ಕಾರ್ಯನಿರತ ಪತ್ರಕರ್ತ ಸಂಘದ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಂಜುನಾಥ ಆರೆಪಲ್ಲಿ ವಹಿಸಿದ್ದರು. ಪಟ್ಟಣ ಪಂಚಾಯಿತಿ ಅಧ್ಯಕ್ಷೆ ದೇವಕ್ಕ ಗುಡಿಮನಿ, ಜಿ.ಪಂ ಮಾಜಿ ಅಧ್ಯಕ್ಷ ವಿಶ್ವನಾಥ ಕಪ್ಪತ್ತನವರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಚ್.ಡಿ. ಮಾಗಡಿ, ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ, ವಿಪ್ರ ಸಮಾಜದ ಹಿರಿಯ ಮುಖಂಡ ಎನ್.ಆರ್. ಕುಲಕರ್ಣಿ, ಡಿ.ಕೆ. ಹೊನ್ನಪ್ಪನವರ, ನಾಗರಾಜ ಲಕ್ಕುಂಡಿ, ತಿಪ್ಪಣ್ಣ ಕೊಂಚಿಗೇರಿ, ತಿಮ್ಮರಡ್ಡಿ ಮರಡ್ಡಿ, ಮೋಹನ ಗುತ್ತೆಮ್ಮನವರ, ಡಾ. ಸುನೀಲ ಬುರಬರೆ, ಸಿ.ಸಿ. ನೂರಶೆಟ್ಟರ, ಎಚ್.ಎಂ. ದೇವಗಿರಿ, ಧರ್ಮಸ್ಥಳ ಸಂಘದ ಯೋಜನಾಧಿಕಾರಿ ಪುನೀತ ಓಲೇಕಾರ, ಬಸವರಾಜ ತುಳಿ, ಶಿವಪ್ಪ ಹದ್ಲಿ, ವಿರೂಪಾಕ್ಷಪ್ಪ ಕಣವಿ, ಪ್ರಕಾಶ ಭೋರಶೆಟ್ಟರ, ಮಹಾಂತೇಶ ದಶಮನಿ, ರವಿ ಗುಡಿಮನಿ, ಎಂ.ಕೆ. ಲಮಾಣಿ, ಹಸನ ತಹಸೀಲ್ದಾರ, ತಹಸೀಲ್ದಾರ ರಾಘವೇಂದ್ರ ರಾವ್, ಪಿಎಸ್‌ಐ ಚನ್ನಯ್ಯ ದೇವೂರ ಮುಂತಾದವರು ಉಪಸ್ಥಿತರಿದ್ದರು.

ಶಿರಹಟ್ಟಿಯಲ್ಲಿ ಪತ್ರಿಕಾ ಭವನ ನಿರ್ಮಾಣಕ್ಕೆ ಶ್ರೀಮಠದ ವತಿಯಿಂದ ಒಂದು ಲಕ್ಷ ರೂ ನೀಡುವುದಾಗಿ ಜ.ಫ. ದಿಂಗಾಲೇಶ್ವರ ಸ್ವಾಮೀಜಿ ತಮ್ಮ ಆಶೀರ್ವಚನದಲ್ಲಿ ಘೋಷಣೆ ಮಾಡಿದರು.

ಹಿರಿಯ ಪತ್ರಕರ್ತ ಜಿ.ಬಿ. ಹೆಸರೂರ, ಪವಿತ್ರಾ ಕುರ್ತಕೋಟಿ, ಯಲ್ಲಪ್ಪ ಗೋಶಲ್ಯನವರ ಇವರನ್ನು ಸನ್ಮಾನಿಸಲಾಯಿತು.

# ಗಣಾಚಾರ ಪ್ರಶಸ್ತಿ ಪ್ರದಾನ ಸಮಾರಂಭ



■ ವಿಜಯಸಾಕ್ಷಿ ಸುದ್ದಿ, ಗದಗ

ಇಳಕಲ್ಲಿನ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನಮಠದಲ್ಲಿ ಜರುಗಿದ ಶ್ರೀ ಅಂಬಿಗ ಚೌಡಯ್ಯ ಹಾಗೂ ಶ್ರೀ ಅಂಬಿಗ ಕುಮಾರ ಚೌಡಯ್ಯ ಶರಣರ ಗಣಾಚಾರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಗಣಾಚಾರ ಪ್ರಶಸ್ತಿ ಪುರಸ್ಕೃತರಾದ ಬಸವನಬಾಗೇವಾಡಿಯ ಶರಣ ಲಕ್ಷ್ಮಣ ಆರ್.ಗೊಳಸಂಗಿ ಹಾಗೂ ಇಂಡಿಯ ಶರಣೆ ಪಾರ್ವತಿ ಸೊನ್ನದರವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ರಾಮದುರ್ಗದ 'ಬಸವ ಬೆಳಗು' ಪತ್ರಿಕೆಯ ಗೌರವ ಸಂಪಾದಕ ಪ್ರೊ. ಸಿದ್ದಣ್ಣ ಲಂಗೋಟಿ ಮಾತನಾಡಿ, ಶರಣರು 12ನೇ ಶತಮಾನದ ಬಸವಾದಿ ಶರಣರ ಪರಂಪರೆಯ ಬಳಿಹಿಡಿದು 20–21ನೇ ಶತಮಾನದವರೆಗೆ ಅನೇಕ ಆಧುನಿಕ ವಚನಕಾರರು ಬಸವಾದಿ ಶರಣರ ವಚನಗಳನ್ನು ಅಧ್ಯಯನ ಮಾಡಿ ಅರಿತು–ಆಚಾರ–ಅನುಭಾವದಿಂದ ವಚನಗಳನ್ನು ರಚಿಸುತ್ತಿದ್ದಾರೆ. ವಚನ ಸಾಹಿತ್ಯ ಚಲನಶೀಲ ಅನುಭಾವ ಸಾಹಿತ್ಯವಾಗಿದೆ ಎಂದರು.

ಅತಿಥಿಗಳಾಗಿ ಪಾಲ್ಗೊಂಡಿದ್ದ ಹಿರಿಯ ಸಾಹಿತಿ ಪ.ಗು. ಸಿದ್ದಾಪುರ ಶರಣರು ಮಾತನಾಡಿದರು. ತ್ರಿಪದಿ ತೀರ್ಥ ಮತ್ತು ವಿಶ್ವಗುರು ಬಸವಣ್ಣನವರ ವಚನಗಳು ಗ್ರಂಥಗಳು ಪೂಜ್ಯ ಶ್ರೀ ಡಾ. ಸಿದ್ದರಾಮ ಬೆಲ್ದಾಳ ಶರಣರಿಂದ ಲೋಕಾರ್ಪಣೆಗೊಂಡವು.

ಸಮಾರಂಭದ ದಿವ್ಯ ನೇತೃತ್ವ ವಹಿಸಿದ್ದ ಪೂಜ್ಯ ಶ್ರೀ ಮ.ನಿ.ಪ್ರ. ಡಾ. ಬಸವಲಿಂಗ ಸ್ವಾಮಿಗಳವರು ಅಂಬಿಗ ಚೌಡಯ್ಯ ಶರಣರ ವಚನಾನುಭಾವ ನುಡಿದರು. ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿದ್ದ ಪೂಜ್ಯ ಶ್ರೀ ಮ.ನಿ.ಪ್ರ. ಗುರುಮಹಾಂತಸ್ವಾಮಿಗಳವರು ಬಸವಾದಿ ಶರಣರ ಪರಂಪರೆ ನಡೆದುಬಂದ ದಾರಿಯ ಕುರಿತು ಅನುಭಾವ ನೀಡಿದರು. ಪೂಜ್ಯ ಶ್ರೀ ನವಲಿಂಗ ಶರಣರು, ಪೂಜ್ಯ ಮಾತೆ ಸತ್ಯಕ್ಕ ತಾಯಿಯವರು, ಪೂಜ್ಯ ಶ್ರೀ ಮನಗೂಳಿ ವಿರಕ್ತ ಮಠದ ಸ್ವಾಮೀಜಿಗಳು, ಎಸ್.ವಾಯ್. ಗದಗ ಶರಣರು ಉಪಸ್ಥಿತರಿದ್ದರು.

ಶರಣೆ ಕಲಾಶ್ರೀ ಕ್ಯಾರಕೊಪ್ಪ ಸ್ವಾಗತಿಸಿದರು. ಶರಣ ಸಂಗನಬಸವನ ಶ್ರೀಪಾದ ಹಾದಿಮನಿಯವರು ಕಾರ್ಯಕ್ರಮ ನಿರೂಪಿಸಿದರು.

# ಶ್ರೀ ಸಿದ್ಧಾರೂಡ ಕಥಾಮೃತ ಗ್ರಂಥ ಮೆರವಣಿಗೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಶ್ರೀ ಸಿದ್ಧಾರೂಡ ಕಥಾಮೃತ ಪುರಾಣ ಪ್ರಾರಂಭೋತ್ಸವ ನಿಮಿತ್ತ ಬುಧವಾರ ಶ್ರೀ ಸಿದ್ಧಾರೂಡ ಕಥಾಮೃತ ಪುರಾಣ ಗ್ರಂಥವನ್ನು ಎತ್ತಿನ ಬಂಡಿಯಲ್ಲಿ ವಾದ್ಯಮೇಳ, ಭಜನೆ, ಮಹಿಳೆಯರ ಪೂರ್ಣಕುಂಭದೊಂದಿಗೆ ಮೆರವಣಿಗೆ ಮಾಡಲಾಯಿತು.



ಪಟ್ಟಣದ ಕೆಇಬಿಯ ಆವರಣದ ಗಣೇಶ ದೇವಸ್ಥಾನದಿಂದ ಅಲಂಕೃತ ಎತ್ತಿನ ಬಂಡಿಯಲ್ಲಿ ಪುರಾಣ ಗ್ರಂಥವನ್ನಿರಿಸಿ ಹತ್ತಾರು ಜೋಡೆತ್ತುಗಳೊಂದಿಗೆ ಶ್ರದ್ಧಾ ಭಕ್ತಿಯಿಂದ ಮೆರವಣಿಗೆ ಮಾಡಲಾಯಿತು. ಮೆರವಣಿಗೆಯು ಪಂಪವೃತ್ತ, ಬಸ್ತಿಕೇರಿ, ವಿದ್ಯಾರಣ್ಯವೃತ್ತ, ಹಾವಳಿ ಆಂಜನೇಯ ದೇವಸ್ಥಾನ, ಮುಖ್ಯಬಜಾರ ರಸ್ತೆ, ಪಾದಗಟ್ಟಿ ಮೂಲಕ ಸೋಮೇಶ್ವರ ದೇವಸ್ಥಾನದವರೆಗೂ ಸಾಗಿ ಸೋಮೇಶ್ವರ ದೇವಸ್ಥಾನದಲ್ಲಿ ಸಂಪನ್ನಗೊಂಡಿತು.

ಮೆರವಣಿಗೆಗೆ ಚಾಲನೆ ನೀಡಿದ ಸೋಮೇಶ್ವರ ಭಕ್ತರ ಕಮಿಟಿ ಅಧ್ಯಕ್ಷ ಗುರುರಾಜ ಪಾಟೀಲ ಕುಲಕರ್ಣಿ ಮತ್ತು ಸುನೀಲ ಮಹಾಂತಶೆಟ್ಟರ ಮಾತನಾಡಿ, ಪುಲಿಗೆರೆ ಸೋಮೇಶ್ವರನ ಪುಣ್ಯ ನೆಲದಲ್ಲಿ ಧರ್ಮ, ಸಂಸ್ಕೃತಿ, ಸಂಪ್ರದಾಯ, ಆಚರಣೆಗಳನ್ನು ಮುಂದುವರೆಸಿಕೊಂಡು ಹೋಗುವುದು ಎಲ್ಲರ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ಪಟ್ಟಣದ ಶ್ರೀ ಸೋಮೇಶ್ವರ ಪುರಾಣ ಸಮಿತಿಯಿಂದ ಶ್ರಾವಣ ಮಾಸದುದ್ದಕ್ಕೂ ದೇವತಾ ಪುರುಷರ ಪುರಾಣ ಪ್ರವಚನವನ್ನು ನಡೆಸುತ್ತಾ ಬರುತ್ತಿರುವುದು ಶ್ಲಾಘನೀಯ ಎಂದರು.

ವಕೀಲರಾದ ವಿ.ಎಲ್. ಪೂಜಾರ, ಎಸ್.ಪಿ. ಪಾಟೀಲ, ಚಂಬಣ್ಣ ಬಾಳಿಕಾಯಿ, ಕುಬೇರಪ್ಪ ಮಹಾಂತಶೆಟ್ಟರ, ಚನ್ನಪ್ಪ ಜಗಲಿ, ಬಸವೇಶ ಮಹಾಂತಶೆಟ್ಟರ, ಸುನೀಲ ಮಹಾಂತಶೆಟ್ಟರ, ಭರಮಪ್ಪ ಕೊಡ್ಲಿ, ಶಂಕರ ಬಾಳಿಕಾಯಿ, ವಿರೂಪಾಕ್ಷಪ್ಪ ಆದಿ, ನಂದೀಶ ಬಂಡಿವಾಡ, ಮಯೂರಗೌಡ ಪಾಟೀಲ, ಬಂಗಾರೆಪ್ಪ ಮುಳಗುಂದ, ಬಸಣ್ಣ ಉಮಚಗಿ, ಎನ್.ಆರ್. ಸಾತಪುತೆ, ವಿಜಯ ಮೆಕ್ಕಿ, ಬಸವರಾಜ ಮೆಣಸಿನಕಾಯಿ, ರಾಜಶೇಖರ ಶಿಗ್ಲಿಮಠ, ಸಿದ್ದು ರಾಚನಾಯ್ಕರ, ಎನ್.ಎಂ. ಗೊರವರ, ಸೋಮಣ್ಣ ಸುತಾರ, ಮಂಜುನಾಥ ಜಲ್ಲಿ, ಈಶಪ್ಪ ಉಮಚಗಿ ಸೇರಿ ಅನೇಕರಿದ್ದರು.

# ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸೋಣ

▶▶ ಮೊದಲನೇ ಪುಟದಿಂದ

ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಸ್ವಾತಂತ್ರ್ಯೋತ್ಸವ ದಿನಾಚರಣೆಯ ಸಮಾರಂಭದಲ್ಲಿ ಯಾವುದೇ ಗೊಂದಲಗಳಾಗದಂತೆ ಅಚ್ಚುಕಟ್ಟಾಗಿ ನಿರ್ವಹಿಸಲು ವಿವಿಧ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು. ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ಎಲ್ಲ ಅಧಿಕಾರಿ ಹಾಗೂ ಸಿಬ್ಬಂದಿಗಳ ಹಾಜರಾತಿ ಕಡ್ಡಾಯವಾಗಿದೆ ಎಂದರು.

ಪವಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ, ವಾರ್ತಾ ಮತ್ತು ಸಾ.ಸಂ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಕೌಶಲ್ಯಾಭಿವೃದ್ಧಿ ಇಲಾಖೆ ಅಧಿಕಾರಿ ಬಸವರಾಜ ಮಲ್ಲೂರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ವಚನ ಸಾಹಿತ್ಯದಲ್ಲಿ ಮಾನವೀಯ ಮೌಲ್ಯಗಳಿವೆ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಶ್ರಾವಣ ಮಾಸ ಅತ್ಯಂತ ಶ್ರೇಷ್ಠವಾದ ಮಾಸವಾಗಿದ್ದು, ವಚನ ಸಾಹಿತ್ಯದಲ್ಲಿ ಮಾನವೀಯ ಮೌಲ್ಯ ಅಡಕವಾಗಿದೆ ಎಂದು ಪ್ರಾಚಾರ್ಯ ಎ.ಎಂ. ಅಂಗಡಿ ಹೇಳಿದರು.

ಅವರು ಪಟ್ಟಣದ ಬಾಲಲೀಲ ಮಹಾಂತ ಶಿವಯೋಗಿಗಳ ಗವಿಮಠದಲ್ಲಿ ಶ್ರಾವಣ ಮಾಸದ ಪ್ರವಚನದಲ್ಲಿ ಉಪನ್ಯಾಸ ನೀಡಿ, ವಚನ ಸಾಹಿತ್ಯದ ಮೂಲಕ ಪ್ರಪಂಚಕ್ಕೆ 12ನೇ ಶತಮಾನದ ಶರಣರು ಮಾನವೀಯ ಮೌಲ್ಯಗಳ ಸಾರವನ್ನು ಕೊಟ್ಟಿದ್ದಾರೆ. ಎಲ್ಲರೂ ಸಮಾನತೆ, ಕಾಯಕ ತತ್ವ, ನಿಷ್ಠೆ, ಶ್ರದ್ಧೆಯಿಂದ ಅನುಭವ ಸಾಹಿತ್ಯ ನೀಡಿದವರು. ಇಂತಹ ಮಾನವೀಯ ಮೌಲ್ಯಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಪ್ರವಚನಕಾರ ವೇ.ಮೂ ಪಿ.ಎಸ್. ಮರಿದೇವರಮಠ ಪ್ರವಚನ ನೀಡಿದರು. ಸಂಗೀತ ಸೇವೆಯನ್ನು ವಿಜಯಲಕ್ಷ್ಮೀ ಹಿರೇಮಠ ನಿರ್ವಹಿಸಿದರು. ಶಂಕ್ರಪ್ಪ ಮಡ್ಡಿ, ಮಲ್ಲಪ್ಪ ಬಳ್ಳಾರಿ ಇದ್ದರು.

# ಯೂರಿಯಾ ಗೊಬ್ಬರಕ್ಕಾಗಿ ಮುಗಿಬಿದ್ದ ರೈತರು



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣ ಸೇರಿದಂತೆ ಹೋಬಳಿಯಾದ್ಯಂತ ಯೂರಿಯಾ ಗೊಬ್ಬರ ಅಭಾವ ಸೃಷ್ಟಿಯಾಗಿದ್ದು, ರೈತರು ಯೂರಿಯಾ ಗೊಬ್ಬರಕ್ಕಾಗಿ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.

ಪಟ್ಟಣದ ಮೂರು ಖಾಸಗಿ ರಸಗೊಬ್ಬರ ಮಾರಾಟ ಮಳಿಗೆ, ಶ್ರಮಜೀವಿ ರೈತ ಉತ್ಪಾದನಾ ಕೇಂದ್ರ ಹಾಗೂ ಟಿಎಪಿಸಿಎಂಎಸ್ ಕೇಂದ್ರಗಳಲ್ಲಿ ಯೂರಿಯಾ ಮಾರಾಟ ಮಾಡಲಾಗುತ್ತಿದೆ. ಆದರೆ, ಯೂರಿಯಾ ಅಭಾವದ ಕಾರಣದಿಂದ ಪಟ್ಟಣದ ಎಫ್‌ಪಿಒ ಮತ್ತು ಟಿಎಪಿಸಿಎಂಎಸ್‌ನಲ್ಲಿ ಮಾತ್ರ ಯೂರಿಯಾ ಲಭ್ಯವಿದ್ದು, ಅದು ಕೂಡ ಕ್ಷಣ ಮಾತ್ರದಲ್ಲಿ ಖಾಲಿಯಾಗುತ್ತಿದೆ.

ಪ್ರತಿಯೊಬ್ಬ ರೈತರಿಗೆ ಎರಡು ಚೀಲ ಮಾತ್ರ ಯೂರಿಯಾ ವಿತರಿಸಲಾಗುತ್ತಿದೆ. ಹತ್ತಾರು ಎಕರೆ ಗೋವಿನಜೋಳ, ಶೇಂಗಾ ಸೇರಿದಂತೆ ಇತರೆ ಬೆಳೆ ಬೆಳೆಯಲಾಗಿದ್ದು, ಅತಿಯಾದ ಮಳೆಯಿಂದ ಬೆಳೆಗಳು ಹಾಳಾಗುತ್ತಿವೆ. ಅವುಗಳನ್ನು ರಕ್ಷಿಸಿಕೊಳ್ಳಲು ಯೂರಿಯಾ ಅತ್ಯಗತ್ಯವಾಗಿದ್ದು, ಯೂರಿಯಾ ಗೊಬ್ಬರ ಸಿಗದ ಕಾರಣ ರೈತರು ಕಂಗಾಲಾಗಿದ್ದಾರೆ.

ಪಟ್ಟಣದ ಟಿಎಪಿಸಿಎಂಎಸ್ ಕೇಂದ್ರದಲ್ಲಿ ಸೋಮವಾರ 250 ಚೀಲ ಹಾಗೂ ಮಂಗಳವಾರ 550 ಚೀಲ ಯೂರಿಯಾ ಮಾರಾಟವಾಗಿದ್ದು, ಸರತಿ ಸಾಲಿನಲ್ಲಿ ನಿಂತು ಗೊಬ್ಬರ ಸಿಗದೆ ರೈತರು ಬೇಸರದಿಂದ ಮನೆಕಡೆಗೆ ಹೋದ ದೃಶ್ಯ ಕಂಡು ಬಂದಿತು.

ಎಲ್ಲಿಯೂ ಯೂರಿಯಾ ಗೊಬ್ಬರ ಲಭ್ಯವಾಗುತ್ತಿಲ್ಲ. ಲಭ್ಯವಿರುವ ಕಡೆಗಳಲ್ಲಿ ಹೆಚ್ಚಿನ ದರಕ್ಕೆ ಮಾರಾಟವಾಗುತ್ತಿದೆ. ಆದ್ದರಿಂದ, ಎಲ್ಲ ಕಡೆಗಳಲ್ಲಿ ಯೂರಿಯಾ ಗೊಬ್ಬರ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಅಶೋಕ ಬೇವಿನಕಟ್ಟಿ ಮತ್ತಿತರ ರೈತರು ಆಗ್ರಹಿಸಿದ್ದಾರೆ.

# ಯೂರಿಯಾ ಸಮರ್ಪಕ ವಿತರಣೆಗೆ ಕ್ರಮ ಕೈಗೊಳ್ಳಿ

▶▶ ಮೊದಲನೇ ಪುಟದಿಂದ

ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಸಂಘದ ಗೌರವಾಧ್ಯಕ್ಷ ಸುರೇಶ ಸಿಂದಗಿ ಮಾತನಾಡಿ, ಬೆಣ್ಣೆಹಳ್ಳದ ನೀರಿನಿಂದ ಪ್ರತಿ ವರ್ಷ ಲಕ್ಷಾಂತರ ಹೆಕ್ಟೇರ್ ಬೆಳೆ ಹಾನಿಯಾಗುತ್ತಿದ್ದು, ಫಲವತ್ತಾದ ಜಮೀನಿನ ಮಣ್ಣು ಕೊಚ್ಚಿಕೊಂಡು ಹೋಗುತ್ತಿದೆ. ಮೇಲ್ಮಟ್ಟದ ಬ್ಯಾರೇಜ್‌ಗಳನ್ನು ನಿರ್ಮಿಸುವ ಮೂಲಕ ನೀರಿನ ಸದ್ಬಳಕೆ ಮಾಡಿಕೊಳ್ಳಲು ರೈತರಿಗೆ ಅನುಕೂಲ ಮಾಡಿಕೊಡಬೇಕು ಎಂದು ವಿನಂತಿಸಿದರು.

ಈ ಸಂದರ್ಭದಲ್ಲಿ ಬಸವರಾಜ ನವಲಗುಂದ, ರೈತ ಸಂಘಟನೆ ಪದಾಧಿಕಾರಿಗಳಾದ ಬಸವರಾಜ ಮರಾಠ, ಸುನೀಲ ಕರ್ಣೆ, ವೀರೇಶ ಪಾಂಡ್ರೆ, ಮಂಜು ವಡ್ಡರ, ಲಕ್ಷ್ಮವ್ವ ಮೆಳ್ಳಿಗಟ್ಟಿ, ರೇವಣಸಿದ್ದಪ್ಪ ಬಿಡ್ನಾಳ, ಶಿವಾಜಿ ಪರಪ್ಪನವರ, ಮಂಜಪ್ಪ ಬುರ್ಲಿ, ವಿರೇಶ ಯಳಮಲಿ, ನಾಗರಾಜ ಸಾಳಂಕಿ ಮುಂತಾದವರಿದ್ದರು.

# ಶಿಥಿಲ ಶಾಲಾ ಕಟ್ಟಡ: ಪರ್ಯಾಯ ವ್ಯವಸ್ಥೆಗೆ ಸಚಿವ ಸಂತೋಷ್ ಲಾಡ್ ಸೂಚನೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯಲ್ಲಿ ಕೆಲವು ಶಾಲಾ–ಕಾಲೇಜು ಹಾಗೂ ಅಂಗನವಾಡಿ ಕಟ್ಟಡಗಳು ಶಿಥಿಲಗೊಂಡಿದ್ದು, ಈ ಶಾಲೆಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಪರ್ಯಾಯ ವ್ಯವಸ್ಥೆ ಮಾಡುವಂತೆ ಕಾರ್ಮಿಕ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ್ ಎಸ್.ಲಾಡ್ ಸೂಚಿಸಿದ್ದಾರೆ.



ಈ ಸಂಬಂಧ ಧಾರವಾಡ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಧಾರವಾಡದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕರು ಹಾಗೂ ಧಾರವಾಡದ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪ ನಿರ್ದೇಶರಿಗೆ ಸಚಿವರು ಪತ್ರ ಬರೆದಿದ್ದಾರೆ.

ಧಾರವಾಡ ಮತ್ತು ಇತರೆ ಪ್ರದೇಶಗಳಲ್ಲಿ ಕೆಲವು ಶಾಲಾ–ಕಾಲೇಜು ಹಾಗೂ ಅಂಗನವಾಡಿ ಕಟ್ಟಡಗಳು ಶಿಥಿಲಗೊಂಡಿರುವುದು ಗಮನಕ್ಕೆ ಬಂದಿದೆ. ಕಲಘಟಗಿ ಕ್ಷೇತ್ರದ ಪ್ರವಾಸದಲ್ಲಿದ್ದಾಗ ಕೊಠಡಿಗಳು ಶಿಥಿಲಗೊಂಡಿರುವುದು ಗಮನಿಸಿದ್ದೇನೆ. ಇಂತಹ ಕೊಠಡಿಗಳು ಮಕ್ಕಳಿಗೆ ಸೂಕ್ತವಲ್ಲ ಎಂದಿರುವ ಅವರು, ಪರ್ಯಾಯ ವ್ಯವಸ್ಥೆ ಮಾಡುವಂತೆ ತಿಳಿಸಿದ್ದಾರೆ.

ಲೋಕೋಪಯೋಗಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ತಾಂತ್ರಿಕ ಅಧಿಕಾರಿಗಳು ಜಿಲ್ಲೆಯ ಎಲ್ಲಾ ಶಾಲೆಗಳಿಗೆ ಭೇಟಿ ನೀಡಿ ವಸ್ತುಸ್ಥಿತಿ ಪರಿಶೀಲಿಸಿ ವಿವರ ವರದಿಯೊಂದಿಗೆ ಪೂರ್ಣ ಪ್ರಮಾಣದ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಕಾಲಮಿತಿಯಲ್ಲಿ ಸಲ್ಲಿಸಲು ಸಚಿವರು ಸೂಚಿಸಿದ್ದಾರೆ.

# ನಾಗರ ಪಂಚಮಿ: ದೇಗುಲಗಳಲ್ಲಿ ವಿಶೇಷ ಪೂಜೆ

■ ವಿಜಯಸಾಕ್ಷಿ ಸುದ್ದಿ, ಡಂಬಳ

ನಾಗರ ಪಂಚಮಿ ಅಂಗವಾಗಿ ಡಂಬಳ ಹೋಬಳಿಯ ಕದಾಂಪುರ, ಪೇಠಾ ಆಲೂರ, ಮೇವುಂಡಿ, ಬರದೂರ, ಹಳ್ಳಿಕೇರಿ, ಹಳ್ಳಿಗುಡಿ, ಡೋಣಿ, ಡೋಣಿ ತಾಂಡ, ಯಕ್ಲಾಸಪೂರ, ಹೈತಾಪೂರ, ಮುರಡಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಮಹಿಳೆಯರು ನಾಗಪ್ಪನ ಕಟ್ಟೆಗೆ ಹಾಲೆರೆಯುವ ಮೂಲಕ ಸಂಭ್ರಮದಿಂದ ಹಬ್ಬ ಆಚರಿಸಿದರು.



ಮುಂಜಾನೆಯಿಂದಲೇ ದೇವಾಲಯಗಳಲ್ಲಿ ವಿಶೇಷ ಪೂಜೆ ನಡೆಯಿತು. ಮನೆಯಲ್ಲಿ ಹೋಳಿಗೆ, ಖರ್ಚಿಕಾಯಿ, ಎಳ್ಳುಂಡಿ ಸಿದ್ದಪಡಿಸಿ ಮಹಿಳೆಯರೆಲ್ಲ ಸೇರಿ ಸಮೀಪದ ನಾಗಪ್ಪ ದೇವಸ್ಥಾನಕ್ಕೆ ತೆರಳಿ ಕೊಬ್ಬರಿ ಬಟ್ಟಲಿನಲ್ಲಿ ಬೆಲ್ಲವನ್ನಿಟ್ಟು ಹಾಲೆರೆದರು. ವಿಶೇಷವಾಗಿ ರೈತ ಮಹಿಳೆಯರು ವರ್ಷಪೂರ್ತಿ ಕೃಷಿಯಲ್ಲಿ ತೆ–ಊಡಗಿದ್ದಾಗ ಯಾವುದೇ ವಿಷ ಜಂತುಗಳಿಂದ ಅಪಾಯವಾಗದಿರಲಿ, ಮಳೆ–ಬೆಳೆ ಸಮೃದ್ಧಿಯಾಗಿ ಬರಲಿ, ನಾಡಿನೆಲ್ಲೆಡೆ ಸುಖ–ಶಾಂತಿ ನೆಲೆಸಲಿ ಎಂದು ಪ್ರಾರ್ಥಿಸಿದರು. ಮನೆಯಲ್ಲಿ ತಾಯಂದಿರು ನಾಗಮೂರ್ತಿಗೆ ವಿಶೇಷ ತಿನಿಸುಗಳ ನೈವೇದ್ಯ ಮತ್ತು ಹರಕೆ ಹೊತ್ತವರು ಲೋಹಗಳ ಕಣ್ಣು, ಮೀಸೆಗಳನ್ನು ಸಮರ್ಪಿಸಿ, ಮನೆಯವರ ಶ್ರೇಯೋಭಿವೃದ್ಧಿಗಾಗಿ ಹರಕೆ ತೀರಿಸುವುದು ನಂಬಿಕೆಯಾಗಿದೆ. ಹಬ್ಬದ ಅಂಗವಾಗಿ ಮನೆಯಂಗಳದ ಮರಗಳಿಗೆ ಹಗ್ಗದಿಂದ ಜೋಕಾಲಿ ಕಟ್ಟಿ ಮಕ್ಕಳು ಸರದಿಯಂತೆ ಜೋಕಾಲಿ ಆಡುತ್ತಾ ಸಂಭ್ರಮಿಸಿದರು.

# ಗದಗನಿಂದ ಸಿಗಂದೂರು, ಜೋಗ ಜಲಪಾತಕ್ಕೆ ವಿಶೇಷ ಬಸ್







■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಸಾರ್ವಜನಿಕರಿಗೆ ಅನುಕೂಲ ವಾಗುವಂತೆ ಪ್ರತಿ ಭಾನುವಾರ ದಿನದಂದು ದಿ:27-07-2025 ರಿಂದ ದಿ:24-08-2025 ರವರೆಗೆ ಗದಗ-ಸಿಗಂದೂರು ( ಶ್ರೀ ಚೌಡೇಶ್ವರಿ ದೇವಸ್ಥಾನ) ಹಾಗೂ ಗದಗ-ಜೋಗ ಜಲಪಾತ ಪ್ರವಾಸಿ ತಾಣಗಳಿಗೆ ವಾಕರಸಾ ಸಂಸ್ಥೆ ಗದಗ ವಿಭಾಗದಿಂದ ವಿಶೇಷ ವಾಹನ (ಪ್ಯಾಕೇಜ್ ಟೂರ್) ಕಾರ್ಯಾಚರಣೆ ಗೊಳಿಸಲಾಗುತ್ತಿದೆ. (ಶಕ್ತಿ ಯೋಜನೆ ಅನ್ವಯಿಸುವುದಿಲ್ಲಾ) ಈ ಸಾರಿಗೆ ವ್ಯವಸ್ಥೆಯ ಸದುಪಯೋಗ ಪಡೆದುಕೊಳ್ಳಬೇಕೆಂದು ಗದಗ ವಾ.ಕ.ರ.ಸಾ.ಸಂಸ್ಥೆಯ ಗದಗ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಟಲ್ ಹಾರ್ಟ್ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಮಾನವ ಕಳ್ಳ ಸಾಗಾಣಿಕ ತಡೆ ದಿನಾಚರಣೆ

# ಕಾನೂನುಗಳನ್ನು ಎಲ್ಲರೂ ಪಾಲಿಸಬೇಕು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಾನವ ಕಳ್ಳ ಸಾಗಾಣಿಕೆ ಜಾಲ ಕಂಡು ಬರುತ್ತಿದ್ದು, ಅದನ್ನು ತಡೆಗಟ್ಟುವ ನಿಟ್ಟಿನಲ್ಲಿ ಎಲ್ಲರೂ ಮುಂದಾಗಬೇಕು. ಮಾನವ ಹಕ್ಕುಗಳಿಗೆ ಧಕ್ಕೆ ಬರದಂತೆ ನಡೆದುಕೊಳ್ಳುವದರೊಂದಿಗೆ ಕಾನೂನುಗಳನ್ನು ಎಲ್ಲರೂ ಪಾಲಿಸಬೇಕು ಎಂದು ಹಿರಿಯ ದಿವಾಣಿ ನ್ಯಾಯಾಧೀಶರಾದ ಭರತ್ ಕರಗುದರಿ ತಿಳಿಸಿದರು.

ಅವರು ಪಟ್ಟಣದ ಲಿಟಲ್ ಹಾರ್ಟ್ಸ್ ಇಂಟರನ್ಯಾಶನಲ್ ಸ್ಕೂಲ್‌ನಲ್ಲಿ ಬುಧವಾರ ತಾಲೂಕು ಕಾನೂನು ಸೇವೆಗಳ ಸಮಿತಿ ಲಕ್ಷ್ಮೇಶ್ವರ, ವಕೀಲರ ಸಂಘ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ, ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕ ಆಡಳಿತ, ತಾಲೂಕು ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ ಹಾಗೂ ಪ್ರತಿಜ್ಞಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಮಕ್ಕಳ ಕಳ್ಳ ಸಾಗಾಣಿಕೆಯನ್ನು ತಡೆಗಟ್ಟುವುದು ಕಾನೂನಿನಿಂದ ಮಾತ್ರ ಸಾಧ್ಯವಿಲ್ಲ. ಅದನ್ನು ಎಲ್ಲರೂ ಜಾಗ್ರತೆಯಿಂದ ಪಾಲಿಸಿದಾಗ ಮಾತ್ರ ಸಾಧ್ಯ. ಅಪ್ರಾಪ್ತರು ಬೈಕ್ ಸವಾರಿ ಮಾಡಬಾರದು. ಹಾಗೇನಾದರೂ ಮಾಡಿದರೆ ಕಾನೂನಿನ ಅಡಿಯಲ್ಲಿ ದಂಡ ವಿಧಿಸಬಹುದಾಗಿದೆ. ಈ ನಿಟ್ಟಿನಲ್ಲಿ ಅಪ್ರಾಪ್ತ ವಯಸ್ಸಿನ ಮಕ್ಕಳು ವಾಹನ ಚಲಾವಣೆ ಮಾಡದಿರುವಂತೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿ, ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆಯ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಅತಿಥಿಗಳಾಗಿ ಆಗಮಿಸಿದ್ದ ದಿವಾಣಿ ನ್ಯಾಯಾಧೀಶರಾದ ಸತೀಶ ಎಂ ಮಾತನಡಿ, ಮಕ್ಕಳು ಮೊಬೈಲ್ ಇನ್‌ಸ್ಟಾಗ್ರಾಂ, ಫೇಸ್‌ಬುಕ್, ವಾಟ್ಸ್‌ಪ್‌ಗಳಂತಹ ಅಂತರ್ಜಾಲಗಳ ಮೋಹಕ್ಕೆ ಬಲಿಯಾಗದೆ ನಿಮ್ಮ ಓದಿನ ಕಡೆ ಗಮನ ಹರಿಸಿ ಉಜ್ವಲ ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಸಭೆಯ ಅಧ್ಯಕ್ಷತೆಯನ್ನು ಪ್ರಾಚಾರ್ಯ ಗಂಗಾಧರ ಶಿರಹಟ್ಟಿ ವಹಿಸಿದ್ದರು. ಸಂಸ್ಥೆಯ ಅಧ್ಯಕ್ಷ ರಾಮೇಶ್ವರ ಶಿರಹಟ್ಟಿ, ಬಿ.ವಿ. ನೇಕಾರ, ವಿ.ಎಸ್. ಪಶುಪತಿಹಾಳ, ಬಿ.ಎಸ್. ಬಾಳೇಶ್ವರಮಠ, ಶಿಕ್ಷಕರಾದ ಬಸೀರಹ್ಮದ್ ಚೌರಿ, ತೇಜಸ್ವಿನಿ ಅಲ್ಲಯ್ಯನವರಮಠ, ವೀರೇಶ ಶಿರಹಟ್ಟಿ, ಪೂರ್ಣಿಮಾ ಕೊಡ್ಲಿ, ಸೀಮಾ ಪಾಟೀಲ ಹಾಗೂ ನ್ಯಾಯಾಲಯದ ಸಿಬ್ಬಂದಿಗಳು ಹಾಜರಿದ್ದರು. ಮೇರಿ ಅಂಥೋನಿ, ಸುವರ್ಣ ಹಡಗಲಿ, ಯಲ್ಲಪ್ಪ ಶಿರೂರ ನಿರೂಪಿಸಿದರು.

ವಕೀಲ ಪ್ರಕಾಶ ವಾಲಿ ಉಪನ್ಯಾಸ ನೀಡಿ, ಭಿಕ್ಷಾಟನೆ ತಡೆಗಟ್ಟುವುದು, ಸೈಬರ್ ಕ್ರೈಮ್‌ಗಳಿಗೆ ಬಲಿಯಾಗದಿರುವುದು, ಮಹಿಳೆಯರು ಮತ್ತು ಮಕ್ಕಳು ಒಬ್ಬಂಟಿಯಾಗಿ ಹೋಗುವಾಗ ಮೋಸಕ್ಕೆ ಒಳಗಾಗದೆ ಜಾಗ್ರತೆ ವಹಿಸಿ ತಮ್ಮ ರಕ್ಷಣೆಯನ್ನು ಮಾಡಿಕೊಳ್ಳಬೇಕು. ಇತ್ತೀಚಿನ ದಿನಮಾನಗಳಲ್ಲಿ ಮಹಿಳೆಯರು ಮತ್ತು ಮಕ್ಕಳು ಆಸೆ-ಆಮಿಷಗಳಿಗೆ ಒಳಗಾಗಿ ಮಾನವ ಕಳ್ಳ ಸಾಗಾಣಿಕೆಗೆ ಒಳಗಾಗುತ್ತಿದ್ದಾರೆ. ಆದ್ದರಿಂದ ಮಹಿಳೆಯರು ಮತ್ತು ಮಕ್ಕಳು ಮೋಸಕ್ಕೆ ಒಳಗಾಗದಂತೆ ಜಾಗ್ರತೆ ವಹಿಸಿ ಎಂದರು.

# ಪಂಚಪೀಠಗಳ ಕಾರ್ಯ ಶ್ಲಾಘನೀಯ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿದ್ಯೆಗೆ ವಿನಯವೇ ಭೂಷಣ ಎಂಬಂತೆ ಪ್ರಸ್ತುತ ತಂತ್ರಜ್ಞಾನದ ದಿನಗಳಲ್ಲಿ ಮಕ್ಕಳಿಗೆ ಬಾಲ್ಯದಲ್ಲಿಯೇ ಪಠ್ಯ ಶಿಕ್ಷಣದೊಂದಿಗೆ ತಂದೆ-ತಾಯಿ, ಗುರು-ಹಿರಿಯರ ಬಗ್ಗೆ ಗೌರವ ಭಾವನೆ, ಆಧ್ಯಾತ್ಮಿಕ, ಧಾರ್ಮಿಕ, ಸಾಂಸ್ಕೃತಿಕ ಮತ್ತು ಮಾನವೀಯ ಮೌಲ್ಯಗಳ ಶಿಕ್ಷಣ ನೀಡುವುದು ಅಗತ್ಯವಾಗಿದೆ ಎಂದು ಬನ್ನಿಕೊಪ್ಪ/ಮೈಸೂರ ಜಪದಕಟ್ಟಿಮಠದ ಶ್ರೀ ಡಾ. ಸುಜ್ಞಾನದೇವ ಶಿವಾಚಾರ್ಯರು ಹೇಳಿದರು.

ಅವರು ಬುಧವಾರ ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಸಭಾಂಗಣದಲ್ಲಿ ಶ್ರೀಶೈಲ ಜಗದ್ಗುರು ವಾಗೀಶ ಪಂಡಿತಾರಾಧ್ಯ ಶಿವಾಚಾರ್ಯರ ಲೀಲಾಮೃತ ಪುರಾಣ ಕಾರ್ಯಕ್ರಮ ಉದ್ಘಾಟಿಸಿ ಆಶೀರ್ವಚನ ನೀಡಿದರು.

ಮಠ-ಮಾನ್ಯಗಳು ಈ ನೆಲದಲ್ಲಿ ತ್ರಿವಿಧ ದಾಸೋಹದ ಜೊತೆಗೆ ಧರ್ಮ, ಸಂಸ್ಕಾರ, ಮೌಲ್ಯಗಳನ್ನು ಬಿತ್ತುವ ಸತ್ಕಾರ್ಯ ಮಾಡಿವೆ. ಈ ನಿಟ್ಟಿನಲ್ಲಿ ಪಂಚಪೀಠಗಳ ಕಾರ್ಯ ಶ್ಲಾಘನೀಯ. ನಿತ್ಯದ ಬದುಕಿನ ಜಂಜಾಟಗಳ ನಡುವೆಯೂ ಶ್ರಾವಣ ಮಾಸದಲ್ಲಿ ಮನಸ್ಸಿನ ಶಾಂತಿ ಮತ್ತು ನೆಮ್ಮದಿಗಾಗಿ ಪುಣ್ಯಪುರುಷರ ಪುರಾಣ ಪುಣ್ಯಕಥೆಗಳು ಅವಶ್ಯಕ. ಈ ನಿಟ್ಟಿನಲ್ಲಿ ತಾಯಿ ಪಾರ್ವತಿ ಮಕ್ಕಳ ಬಳಗದವರು ಪ್ರತಿ ವರ್ಷ ಶ್ರಾವಣ ಮಾಸದಲ್ಲಿ ಪುರಾಣ, ಧರ್ಮಾಚರಣೆ, ಸಂಸ್ಕೃತಿ, ಸಂಪ್ರದಾಯ, ಧಾನ, ಧರ್ಮಗಳ ಬಗ್ಗೆ ಜಾಗೃತಿ ಮೂಡಿಸುತ್ತಿರುವ ಕಾರ್ಯ ಶ್ಲಾಘನೀಯ ಎಂದರು.

ಶ್ರಾವಣ ಮಾಸದುದ್ದಕ್ಕೂ ನಡೆಯುವ ಪುರಾಣ ಪ್ರವಚನವನ್ನು ಶಿಕ್ಷಕ ಪ್ರಭುಗೌಡ ಯಕ್ಕಿಕೊಪ್ಪ ನಡೆಸಿಕೊಡಲಿದ್ದು, ಪ್ರತಿನಿತ್ಯ ಸಂಪನ್ಮೂಲ ವ್ಯಕ್ತಿಗಳಿಂದ ವಿವಿಧ ವಿಷಯಗಳ ಬಗ್ಗೆ ಉಪನ್ಯಾಸ ನಡೆಯಲಿದೆ. ಸುವರ್ಣಬಾಯಿ ಬಹಾದ್ದೂರದೇಸಾಯಿ ಅಧ್ಯಕ್ಷತೆ ವಹಿಸಿದ್ದರು. ಜಯಲಕ್ಷ್ಮೀ ಮಹಾಂತಶೆಟ್ಟರ, ಶಾರದಕ್ಕ ಮಹಾಂತಶೆಟ್ಟರ, ಲಲಿತಕ್ಕ ಕೆರಿಮನಿ, ಪ್ರಭುಗೌಡ ಯಕ್ಕಿಕೊಪ್ಪ, ರೂಪಾ ನವಲೆ, ಜೆ.ಡಿ. ಲಮಾಣಿ, ಮೃತ್ಯುಂಜಯ ಹಿರೇಮಠ, ವಿಜಯಕುಮಾರ ಬಿಳಿಯಲಿ, ಶರಣಪ್ಪ ಅಣ್ಣಿಗೇರಿ, ಸೋಮಯ್ಯ ವೀರಕ್ತಮಠ, ಹನುಮಂತಪ್ಪ ಭಜಂತ್ರಿ, ಸ್ವಾತಿ ಪೈ, ವೀಣಾ ಜಾಮನೂರ, ಕಾವ್ಯ ದೇಸಾಯಿ ಇದ್ದರು. ಜ್ಯೋತಿ ಅರಳಿಕಟ್ಟಿ, ಜಗದೀಶ ಶಿರಹಟ್ಟಿ ನಿರೂಪಿಸಿದರು.

# ಅಡವಿಸೋಮಾಪುರ ವಲಯ ಮಟ್ಟದ ಕ್ರೀಡಾಕೂಟ

■ ವಿಜಯಸಾಕ್ಷಿ ಸುದ್ದಿ, ಗದಗ

ಶಾಲಾ ಶಿಕ್ಷಣ ಇಲಾಖೆ ಗದಗ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಕ್ಷೇತ್ರ ಸಂಪನ್ಮೂಲ ಕೇಂದ್ರ ಗದಗ, ಗ್ರಾಮೀಣ ವಲಯ ಹಾಗೂ ಸರಕಾರಿ ಪ್ರೌಢಶಾಲೆ ಲಿಂಗಧಾಳ ಇವರ ಸಂಯುಕ್ತ ಆಶ್ರಯದಲ್ಲಿ ಅಡವಿಸೋಮಾಪುರ ವಲಯ ಮಟ್ಟದ 2025-26ನೇ ಸಾಲಿನ ಕ್ರೀಡಾಕೂಟ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಬುಧವಾರ ನಡೆಯಿತು.

ಲಿಂಗದಾಳ ಗ್ರಾ.ಪಂ ಅಧ್ಯಕ್ಷ ಪ್ರದೀಪಕುಮಾರ ದೇ.ನವಲಗುಂದ ಕ್ರೀಡಾಕೂಟ ಉದ್ಘಾಟಿಸಿ ಕ್ರೀಡಾಪಟುಗಳಿಗೆ ಶುಭ ಕೋರಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್.ಡಿ.ಎಂ.ಸಿ ಅಧ್ಯಕ್ಷ ಉಮೇಶ ವಿ.ಗುಳೇದ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಮುಖ್ಯ ಪಶುವೈದ್ಯಾಧಿಕಾರಿ ಡಾ. ಎಚ್.ಎ. ಜನಗಿ, ಸಮನ್ವಯ ಅಧಿಕಾರಿ ಜೆ.ಎ. ಭಾವಿಕಟ್ಟಿ, ಶಂಕರ ಹಡಗಲಿ, ದೈಹಿಕ ಶಿಕ್ಷಣ ಪರಿವೀಕ್ಷಕ ಎಂ.ವ್ಹಿ. ಪಾಟೀಲ, ಕ.ರಾ.ಪ್ರೌ.ಶಾ.ಸ.ಶಿ. ಸಂಘದ ಜಿಲ್ಲಾಧ್ಯಕ್ಷ ಬಿ.ಎಫ್. ಪೂಜಾರ, ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ರಾಜು ಬಿ.ಚವ್ಹಾಣ, ರೋಟರಿ ಸೆಂಟ್ರಲ್‌ನ ಚೇತನ ಅಂಗಡಿ, ರವಿರಾಜ ಪವಾರ, ಮಹಾಂತೇಶ ಆರ್.ಪೂಜಾರ, ಮಹಾದೇವಪ್ಪ ದಾಟನಾಳ, ಸಿದ್ದಲಿಂಗಪ್ಪ ಚ.ಗುಳೇದ ಹಾಗೂ ದಾನಿಗಳು ಉಪಸ್ಥಿತರಿದ್ದರು.



# ರಾಜ್ಯದಲ್ಲಿ ಸಿಎಂ ಕುರ್ಚಿಗಾಗಿ ಪೈಪೋಟಿ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ರಾಜ್ಯದಲ್ಲಿ ಯೂರಿಯಾ ರಸಗೊಬ್ಬರಕ್ಕಾಗಿ ಹಾಹಾಕಾರ ಉಂಟಾಗಿದ್ದು, ಇತ್ತ ಕಾಂಗ್ರೆಸ್ ನಾಯಕರು ಸಿಎಂ ಕುರ್ಚಿಗಾಗಿ ಪೈಪೋಟಿಗೆ ಇಳಿದಿದ್ದಾರೆ ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಕಾಂಗ್ರೆಸ್ ಸರ್ಕಾರದ ವಿರುದ್ಧ ಹಾರಿಹಾಯ್ದರು.

ಪಟ್ಟಣದಲ್ಲಿ ಬುಧವಾರ ಬಿಜೆಪಿ ಮುಖಂಡ ಪ್ರಾಣೇಶ ವಕೀಲ ಅವರ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ಈಗಾಗಲೇ ರಾಜ್ಯಕ್ಕೆ ಬೇಕಾದ ಅಗತ್ಯ ರಸಗೊಬ್ಬರ ಪೂರೈಕೆ ಮಾಡಿದೆ. ಆದರೆ ರಾಜ್ಯ ಸರ್ಕಾರ ಅದನ್ನು ಸಮರ್ಪಕವಾಗಿ ರೈತರಿಗೆ ವಿತರಿಸದೆ ಕಾಳಸಂತೆಯಲ್ಲಿ ಹೆಚ್ಚಿನ ಕಮಿಷನ್‌ಗಾಗಿ ಮಾರಾಟ ಮಾಡುತ್ತಿದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಅಭಿವೃದ್ಧಿ ಕುಂಠಿತವಾಗಿದ್ದು, ಸ್ವತಃ ಕಾಂಗ್ರೆಸ್ ಶಾಸಕರೇ ಅನುದಾನದ ನೀಡುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಸಿಎಂ ಹುದ್ದೆ ಮೇಲೆ ಕಣ್ಣು ಇಟ್ಟಿದ್ದಾರೆ. ಇದೆಲ್ಲ ಬೆಳವಣಿಗೆ ಗಮನಿಸಿದರೆ ರಾಜ್ಯ ಕಾಂಗ್ರೆಸ್‌ನಲ್ಲಿ ಎಲ್ಲವೂ ಸರಿ ಇಲ್ಲ ಎಂಬುದು ಗೋಚರಿಸುತ್ತದೆ ಎಂದರು.

ನಮ್ಮ ಸರ್ಕಾರದಲ್ಲಿ ನಾನೇನಾದರೂ ಹಗರಣಗಳನ್ನು ಮಾಡಿದ್ದರೆ, ಈಗ ಅವರದ್ದೇ ಸರ್ಕಾರ ಇದೆ ಬೇಕಾದರೆ ತನಿಖೆ ನಡೆಸಲಿ. ತಪ್ಪಿದ್ದಲ್ಲಿ ನಾನು ಶಿಕ್ಷೆ ಅನುಭವಿಸಲು ಸಿದ್ದನಿದ್ದೇನೆ ಎಂದು ಶ್ರೀರಾಮುಲು ಬಿ.ನಾಗೇಂದ್ರರ ಹೇಳಿಕೆಗೆ ತಿರುಗೇಟು ನೀಡಿದರು.

ರಾಜ್ಯ ಬಿಜೆಪಿಯಲ್ಲಿರುವ ಭಿನ್ನಮತವನ್ನು ಸರಿಪಡಿಸಲು ರಾಷ್ಟ್ರೀಯ ನಾಯಕರು ನನಗೆ ಜವಬ್ದಾರಿ ಕೊಟ್ಟರೆ ಎಲ್ಲರನ್ನೂ ಒಟ್ಟುಗೂಡಿಸುವ ಕೆಲಸ ಮಾಡುತ್ತೇನೆ. ಹರಪನಹಳ್ಳಿಯ ಬಿಜೆಪಿಯಲ್ಲಿನ ಆಂತರಿಕ ಬಿಕ್ಕಟ್ಟು ಶಮನಗೊಳಿಸಲು ಪ್ರಯತ್ನಿಸುವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಆರುಂಡಿ ನಾಗರಾಜ್, ಡಾ. ರಮೇಶ ಕುಮಾರ, ವಕೀಲ ಪ್ರಾಣೇಶ್, ಗಿರಜ್ಜಿ ನಾಗರಾಜ್, ಶ್ರೀನಿವಾಸ ನಾಯಕ, ಈಡಿಗರ ಅಂಜಿನಪ್ಪ, ಗಿರೀಶ್ ಸೇರಿದಂತೆ ಮತ್ತಿತರರು ಇದ್ದರು.

# ವಿವಿಧ ಗ್ರಾಮಗಳಿಗೆ ಸಿಇಓ ಭರತ್ ಎಸ್ ಭೇಟಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪಂಚಾಯಿತಿ ಸಿಇಒ ಭರತ್ ಎಸ್ ಅವರು ರೋಣ ತಾಲೂಕಿನ ಬಾಸಾಲಪೂರ, ಹಿರೇಮಣ್ಣೂರ, ಸಂದಿಗವಾಡ ಹಾಗೂ ಡ.ಸ.ಹಡಗಲಿ ಗ್ರಾಮಗಳಿಗೆ ಮಂಗಳವಾರ ಭೇಟಿ ನೀಡಿ, ಜಲ ಜೀವನ್ ಮಿಷನ್ (ಜೆಜೆ-ಎಂ) ಹಾಗೂ ಬಹು ಗ್ರಾಮ ಕುಡಿಯುವ ನೀರು ಯೋಜನೆಯ ಕಾಮಗಾರಿಗಳನ್ನು ಪರಿಶೀಲಿಸಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರ ಸೂಚನೆಯಂತೆ, ಜಲ ಜೀವನ್ ಮಿಷನ್ ಯೋಜನೆಯಡಿ ಪೂರ್ಣಗೊಂಡ ಕಾಮಗಾರಿಗಳನ್ನು ಪರಿಶೀಲಿಸಿ ವರದಿ ಸಲ್ಲಿಸುವ ಜವಾಬ್ದಾರಿಯನ್ನು ಸಿಇಒ ಭರತ್ ಎಸ್ ತೆಗೆದುಕೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ, ರೋಣ ತಾಲೂಕಿನ ಆಯ್ದ ಗ್ರಾಮಗಳಿಗೆ ಅನಿರೀಕ್ಷಿತ ಭೇಟಿ ನೀಡಿ, ಜೆಜೆಎಂ ಕಾಮಗಾರಿಗಳು, ಸಂಪರ್ಕಗಳ ಗುಣಮಟ್ಟ, ಮೀಟರ್ ಅಳವಡಿಕೆ, ರಸ್ತೆ ಪುನಶ್ಚೇತನ, ನೀರಿನ ಗುಣಮಟ್ಟ, ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳ ಕಾರ್ಯ ನಿರ್ವಹಣೆ ಕುರಿತು ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ರೋಣ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ ಕಂದಕೂರ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಪ್ರಭಾರ ಕಾರ್ಯಪಾಲಕ ಇಂಜಿನಿಯರ್ ರಾಘವೇಂದ್ರ ದೊಡ್ಡಮನಿ, ಸಹಾಯಕ ಇಂಜಿನಿಯರ್ ಮಹದೇವಪ್ಪ ಹೊಸಮನಿ, ಪವನ ಪವಾರ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಚಂದ್ರಕಾಂತ ನರ್ಲೆಕರ, ಸಹಾಯಕ ಇಂಜಿನಿಯರ್ ಶರಣಬಸವ ಎಸ್. ಎಸ್, ಗ್ರಾ.ಪಂ ಅಧ್ಯಕ್ಷರು, ಸದಸ್ಯರು, ಅಭಿವೃದ್ಧಿ ಅಧಿಕಾರಿಗಳು ಮತ್ತು ಕಾರ್ಯದರ್ಶಿಗಳು ಉಪಸ್ಥಿತರಿದ್ದರು.

# ಧರ್ಮಸ್ಥಳ ಪ್ರಕರಣ: ದೂರುದಾರ ಮಾನಸಿಕ ಆರೋಗ್ಯವಾಗಿದ್ದಾನಾ ಮೊದಲು ತಿಳಿಯಲಿ- ಬಿ.ಸಿ.ಪಾಟೀಲ್!

■ ವಿಜಯಸಾಕ್ಷಿ ಸುದ್ದಿ, ಹಾವೇರಿ



ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ದೂರುದಾರ ಮಾನಸಿಕ ಆರೋಗ್ಯವಾಗಿದ್ದಾನಾ ಎಂಬುವುದನ್ನು ಎಸ್ ಐಟಿ ಮೊದಲು ತಿಳಿಯಬೇಕು ಎಂದು ಮಾಜಿ ಸಚಿವ ಬಿ.ಸಿ.ಪಾಟೀಲ್ ಹೇಳಿದ್ದಾರೆ.

ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ಅನಾಮಿಕ ದೂರುದಾರ ಮೊದಲು ಮಾನಸಿಕವಾಗಿ ಸ್ವಸ್ತನಾಗಿದ್ದಾನೋ ಅಥವಾ ಅಸ್ವಸ್ಥನಾಗಿದ್ದಾನೋ ಎನ್ನುವುದನ್ನು ಮಾನಸಿಕ ತಜ್ಞರಿಂದ ಮೊದಲು ಪರೀಕ್ಷಿಸಬೇಕು. ನಂತರ ಕ್ರಮ ಜರುಗಿಸುವುದು ಒಳ್ಳೆಯದು ಎನ್ನುವುದು ನನ್ನ ಅಭಿಪ್ರಾಯ ಎಂದಿದ್ದಾರೆ.

ನಾನು ಪೊಲೀಸ್ ಇಲಾಖೆಯಲ್ಲಿ ಕೆಲಸ ಮಾಡಿದ್ದೇನೆ. ದೂರುದಾರ ಮೊದಲು ಮಾನಸಿಕವಾಗಿ ಆರೋಗ್ಯವಾಗಿದ್ದಾನಾ ಅನ್ನೋದನ್ನ ದೃಢಪಡಿಸಿಕೊಂಡ ನಂತರ ಎಸ್‌ಐಟಿ ತಂಡ ತನಿಖೆ ಮಾಡುವುದು ಸೂಕ್ತ ಎಂದು ಅಭಿಪ್ರಾಯಪಟ್ಟಿದ್ದಾರೆ.


ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಹಾರೋಗೇರಿ, ತಾಲೂಕ ॥ ಮುಂಡರಗಿ, ಜಿಲ್ಲಾ ॥ ಗದಗ**

**E-mail : harogeri.mun.gdg@gmail.com**

ಸಂ.ಗ್ರಾ.ಪಂ.ಹಾ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2025-26 ದಿನಾಂಕ : 22.07.2025

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಹಾರೋಗೇರಿ ಇವರು 2025-26 ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ |
|---|---|---|
| 01 | 1514002008-25-76 ಬ ಗ್ರಾ ಮುಂಡರಗಿ ರಸ್ತೆಯಿಂದ ಅಶೋಕಯ್ಯ ತಾಮ್ರಗುಂಡಿ ಮನೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | **285722.88** |
| 02 | 1514002008-25-293 ಬ ಗ್ರಾ ಸೇವಾಲಾಲ್ ಗುಡಿಯಿಂದ ಪ್ರಕಾಶಪ್ಪ ಇದ್ಲಿ ಇವರ ಹಿತ್ತಲದವರೆಗೂ ಗಟಾರ ನಿರ್ಮಾಣ | **115426.08** |
| 03 | 1514002008-25-71 ತಾ ಗ್ರಾ ಕುಡಿಯುವ ನೀರಿನ ಟ್ಯಾಂಕಿನಿಂದ ಅಂಗನವಾಡಿಯವರೆಗೆ ಬಾಕ್ಸ ಚರಂಡಿ ನಿರ್ಮಾಣ | **124163.42** |
| 04 | 1514002008-25-161 ಹಾ ಗ್ರಾ ಗವಿಶಿದ್ದಪ್ಪ ಭಜೇಮ್ಮನವರ ಮನೆಯಿಂದ ಹಿರೆವಡ್ಡಟ್ಟಿ ಮುಖ್ಯ ರಸ್ತೆವರೆಗೆ ಗಟಾರ ನಿರ್ಮಾಣ | **118003.27** |
| 05 | 1514002008-25-286 ಹಾ ಗ್ರಾ ಫಕ್ಕಿರೇಶ ಜಂಗರ ಮನೆಯಿಂದ ಹಳ್ಳದವರೆಗೆ ಮನೆಯವರೆಗೆ ಸಿ ಸಿ ಗಟಾರ ನಿರ್ಮಾಣ | **118003.27** |
| 06 | 1514002008-25-285 ಹಾ ಗ್ರಾ ಮಂಜಪ್ಪ ಗುಡಗೇರಿ ಮನೆಯಿಂದ ಫಕ್ಕಿರೇಶ ಜಂಗರ ಮನೆಯವರೆಗೆ ಸಿ ಸಿ ಗಟಾರ ನಿರ್ಮಾಣ | **118003.27** |
| 07 | 1514002008-25-284 ಹಾ ಗ್ರಾ ರಾಮಣ್ಣ ವಡ್ಡರ ಮನೆಯಿಂದ ಹಳ್ಳದವರೆಗೆ ಮನೆಯವರೆಗೆ ಸಿ ಸಿ ಗಟಾರ ನಿರ್ಮಾಣ | **113117.48** |
| 08 | 1514002008-25-218 ಕೆ ಗ್ರಾ ಕಪ್ಪತ್ತಪ್ಪ ಜಾಲವಾಡಗಿ ಮನೆಯಿಂದ ಫಕ್ಕವ್ವ ಲಕ್ಕುಂಡಿ ಮನೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | **70911.15** |
| 09 | 1514002008-25-245 ಹಾರೋಗೇರಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಅಡುಗೆ ಕೋಣೆ ನಿರ್ಮಾಣ | **450470.11** |
| 10 | 1514002008-25-219 ಕೆ ಗ್ರಾ ಉಡಚಮ್ಮನ ಗುಡಿಯಿಂದ ರುಪ್ಲೇಪ್ಪ ಪವಾರ ಹೋಲದವರೆಗೆ ಮೋಹರಂ ರಸ್ತೆ ನಿರ್ಮಾಣ | **137348.37** |
| 11 | 1514002008-25-72 ಹಾ ಗ್ರಾ ಯಲ್ಲಪ್ಪ ಪ್ಯಾಟಿ ಹೋಲದಿಂದ ಪಾಲಾಕ್ಷಗೌಡ ಪಾಟೀಲ ಹೋಲದವರೆಗೆ ಮೋಹರಂ ರಸ್ತೆ ನಿರ್ಮಾಣ | **151147.22** |
| 12 | 1514002008-25-166 ಹಾ ಗ್ರಾ ಫಕ್ಕೀರೇಶ ಭಜೇಮ್ಮನವರ ಮನೆಯಿಂದ ಅಮೃತವ್ವ ಹಳ್ಳಿ ಮನೆವರೆಗೆ ಸಿ ಸಿ ರಸ್ತೆ ನಿರ್ಮಾಣ | **358716.57** |
| 13 | ಹಾ ಗಾ ವೆಂಕಟೇಶ ಪೂಜಾರ ಮನೆಯಿಂದ ರಾಮಣ್ಣ ವಡ್ಡರ ಮನೆಯವರೆಗೆ ಸಿ ಸಿ ಗಟಾರ ನಿರ್ಮಾಣ | **113117.48** |

**ಷರಾ** : ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು ಹಾಗೂ ಪ್ರತಿ ಕಾಮಗಾರಿಯ ಟೆಂಡರ್ ಫಾರಂ ಬೆಲೆ **500.00** ರೂಪಾಯಿಗಳು ನಿಗದಿಪಡಿಸಿದೆ.

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರ್ಮಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ : **25/07/2025** ರಿಂದ **31/07/2025** ರವರೆಗೆ. ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ : **01/08/2025** ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ಟೆಂಡರ್ ತೆರೆಯುವ ದಿನಾಂಕ ಹಾಗೂ ಸಮಯ : **04/08/2025** ರ ಮಧ್ಯಾಹ್ನ 3.00 ಗಂಟೆ.

**ನಿಬಂಧನೆಗಳು** : ಷರತ್ತು/ನಿಬಂಧನೆಗಳಿಗೆ, ಹಾಗೂ ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಗ್ರಾಮ ಪಂಚಾಯತ ಹಾರೋಗೇರಿದಿಂದ ಮಾಹಿತಿ ಪಡೆಯಬಹುದಾಗಿದೆ.

**ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತಿ ಹಾರೋಗೇರಿ**

**ಸಹಿ/- ಅಧ್ಯಕ್ಷರು ಗ್ರಾಮ ಪಂಚಾಯತಿ ಹಾರೋಗೇರಿ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/205/2025-26


# ಜಕ್ಕಲಿ ಗ್ರಾ.ಪಂ ಅಧ್ಯಕ್ಷ ಸ್ಥಾನ ತೆರವು

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಸ್ಥಾನ ತೆರವಾಗಿದೆ. ಸದ್ಯದ ಅಧ್ಯಕ್ಷೆಯಾಗಿದ್ದ ಗಂಗವ್ವ ದ್ಯಾಮಪ್ಪ ಜಂಗಣ್ಣವರ ಅವರ ವಿರುದ್ಧ ವಿರೋಧ ಪಕ್ಷದ ಸದಸ್ಯರು ಅವಿಶ್ವಾಸ ನಿರ್ಣಯ ಮಂಡಿಸಿದ್ದರು. ಒಟ್ಟು 13 ಸದಸ್ಯರ ಪೈಕಿ 9 ಸದಸ್ಯರು ಅವಿಶ್ವಾಸ ನಿರ್ಣಯ ಸಭೆಗೆ ಹಾಜರಿದ್ದುದರಿಂದ ಉಪವಿಭಾಗಾಧಿಕಾರಿ ಗಂಗಪ್ಪ ಎಂ ಕೋರಂ ಭರ್ತಿಯಾಗಿದೆ ಎಂಬ ನಿರ್ಧಾರಕ್ಕೆ ಬಂದ ನಂತರ ಅವಿಶ್ವಾಸ ಗೊತ್ತುವಳಿಯನ್ನು ಮತಕ್ಕೆ ಹಾಕಿದರು. ಹಾಜರಿದ್ದ 9 ಸದಸ್ಯರೂ ನಿರ್ಣಯದ ಪರ ಇದ್ದುದರಿಂದ ಚುನಾವಣಾಧಿಕಾರಿ ಗಂಗಪ್ಪ ಅಧ್ಯಕ್ಷ ಸ್ಥಾನ ತೆರವಾಗಿದೆ ಎಂದು ರೂಲಿಂಗ್ ನೀಡಿದರು. ಈ ಹಿಂದೆಯೇ ಅಧ್ಯಕ್ಷರ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆಯಾಗಿ ಅದಕ್ಕೆ ಸಭೆ ಸೇರುವ ಸಮಯದಲ್ಲಿ ನ್ಯಾಯಾಲಯದ ತಡೆಯಾಜ್ಞೆ ಇದ್ದುದರಿಂದ ಅವಿಶ್ವಾಸ ನಿರ್ಣಯ ಸಭೆ ಮುಂದೂಡಲ್ಪಟ್ಟಿತ್ತು.




ಸಭೆಯಲ್ಲಿ ಚುನಾವಣಾಧಿಕಾರಿ, ಗದಗ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಕ್ಕಲಿ ಗ್ರಾ.ಪಂ ಪಿಡಿಒ ಎಸ್. ಎಸ್. ರಿತ್ತಿ, ಸಿಬ್ಬಂದಿ ಚಂದ್ರಕಲಾ ಕೆ.ಕೆ. ಇನ್ನಿತರರಿದ್ದರು.

ವಿಜಯೋತ್ಸವ: ಅವಿಶ್ವಾಸ ನಿರ್ಣಯಕ್ಕೆ ಜಯ ಸಿಗುತ್ತಿದ್ದಂತೆ ವಿರೋಧಿ ಪಾಳೆಯದ ಕಾಂಗ್ರೆಸ್ ಸದಸ್ಯರು ಕಾರ್ಯಕರ್ತರು ಸಿಹಿ ಹಂಚಿ, ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಿದರು. ಈ ವೇಳೆ ಗ್ರಾ.ಪಂ ಸದಸ್ಯರಾದ ಶಿವರಾಜ ಮುಗಳಿ, ರಮೇಶ ಪಲ್ಲೇದ, ಸಂತೋಷ ಕೋರಿ, ಗುರಪ್ಪ ರೋಣದ, ಬಸವರಾಜ ಶ್ಯಾಶೆಟ್ಟಿ, ಅನ್ನಪೂರ್ಣ ಮುಗಳಿ, ಸುವರ್ಣ ತಳವಾರ, ಬಿಬಿಜಾನ ಕದಡಿ, ನಿರ್ಮಲಾ ಆದಿ, ಕಾರ್ಯಕರ್ತರಾದ ಸಂದೇಶ ದೊಡ್ಡಮೇಟಿ, ವೀರಭದ್ರಪ್ಪ ಗಾಣಿಗೇರ, ಶ್ರೀನಿವಾಸ ಹುಲ್ಲೂರ, ಮುತ್ತು ಮೇಟಿ, ಪ್ರಕಾಶ ಕೋರಿ, ಬಂಧು ಗಡಾದ, ಚನ್ನಬಸವ ಅರಹುಣಸಿ, ಮುತ್ತಪ್ಪ ತಳವಾರ, ಫಕೀರಪ್ಪ ಮಾದರ, ಬಸವರಾಜ ಮುಗಳಿ, ಅಂದಪ್ಪ ಕಟ್ನಳ್ಳಿ, ವಿಜಯ ತಳವಾರ, ಯಲ್ಲಪ್ಪ ಮಾದರ, ಮಾಬುಸಾಬ ನದಾಫ್, ರಾಜಸಾಬ ಜಿಡ್ಡಿಮನಿ ಸೇರಿದಂತೆ ಇನ್ನಿತರರು ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka